ಸಂಪುಟ : 9 ಸಂಚಿಕೆ 38 ಪುಟ : 4 ಬೆಲೆ: 3.00 ರವಿವಾರ ಮಾರ್ಚ್ 10, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 38 Pages : 4 Price : 3.00 Sunday March 10 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಧರ್ಮಜಾಗೃತಿ ಸಮಾರಂಭ ಇಂದು



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ಶಿವರಾತ್ರಿ ಜಾತ್ರಾ ಮಹೋತ್ಸವದ ಅಂಗವಾಗಿ ಮಾ.10ರಂದು ಸಂಜೆ 5ಕ್ಕೆ ಬಾಳೇಹೊನ್ನೂರ ಶ್ರೀ ರಂಭಾಪುರಿ ಜಗದ್ಗುರು ಡಾ. ವೀರಸೋಮೇಶ್ವರ ಶಿವಾಚಾರ್ಯ ಭಗವತ್ಪಾದರ ಸಾನಿಧ್ಯ ಮತ್ತು ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಮಹಾಸ್ವಾಮಿಗಳ ನೇತೃತ್ವದಲ್ಲಿ ಮಹಾಶಿವರಾತ್ರಿ ಧರ್ಮಜಾಗೃತಿ ಸಮಾರಂಭ ಜರುಗಲಿದೆ.

ನೊಣವಿಕೆರೆ ಕಾಡಸಿದ್ದೇಶ್ವರ ಮಠದ ಕರಿವೃಷಭ ದೇಶಿಕೇಂದ್ರ ಶಿವಯೋಗೀಶ್ವರ ಮಹಾಸ್ವಾಮಿಗಳು ಅಧ್ಯಕ್ಷತೆ ವಹಿಸುವರು. ಬಂಕಾಪುರ ಅರಳೆಲೆ ಹಿರೇಮಠದ ರೇವಣ ಸಿದ್ದೇಶ್ವರ ಸ್ವಾಮಿಗಳು, ಎಮ್ಮಿಗನೂರಿನ ವಾಮದೇವ ಮಹಾಂತಸ್ವಾಮಿಗಳು ಉಪಸ್ಥಿತರಿರುವರು. ಕಾನೂನು ಮತ್ತು ಪ್ರವಾಸೋದ್ಯಮ ಸಚಿವ ಹೆಚ್.ಕೆ. ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು. ಅತಿಥಿಗಳಾಗಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ, ಶಾಸಕ ಡಾ.ಚಂದ್ರು ಲಮಾಣಿ, ಎಂ.ಆರ್. ಪಾಟೀಲ, ಎಸ್.ವಿ. ಸಂಕನೂರ, ಶ್ರೀನಿವಾಸ ಮಾನೆ, ಮಂಜುನಾಥ ಕುನ್ನೂರ, ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ, ಜಿ.ಎಂ. ಮಹಾಂತಶೆಟ್ಟರ, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಎಂ.ಎಸ್. ಅಕ್ಕಿ, ಕುಸುಮಾವತಿ ಶಿವಳ್ಳಿ, ಎಸ್.ಐ. ಚಿಕ್ಕನಗೌಡ್ರ ಸೇರಿ ನಾಡಿನ ಹರಗುರುಚರಮೂರ್ತಿಗಳು, ಜನಪ್ರತಿನಿಧಿಗಳು, ಗಣ್ಯರು ಪಾಲ್ಗೊಳ್ಳುವರು. ಗುರುಸ್ವಾಮಿ ಕಲಕೇರಿಮಠ ಗವಾಯಿಗಳು ಸಂಗೀತ ಸೇವೆ ನೀಡುವರು ಎಂದು ಪ್ರಕಟಣೆ ತಿಳಿಸಿದೆ.

## ದಿಢೀರ್ ರಾಜಿನಾಮೆ ಕೊಟ್ಟ ಕೇಂದ್ರ ಚುನಾವಣಾ ಆಯುಕ್ತ ಅರುಣ್ ಗೋಯಲ್!

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಕೇಂದ್ರ ಚುನಾವಣಾ ಆಯುಕ್ತ ಅರುಣ್ ಗೋಯಲ್ ಶನಿವಾರ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಇನ್ನು ಕೆಲವೇ ವಾರಗಳಲ್ಲಿ ದೇಶದಲ್ಲಿ ಲೋಕಸಭೆ ಚುನಾವಣೆ ನಡೆಯಲಿರುವ ಸಂದರ್ಭದಲ್ಲಿ ಚುನಾವಣಾ ಆಯುಕ್ತರು ರಾಜೀನಾಮೆ ನೀಡಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು ಕೂಡ ಅವರ ರಾಜೀನಾಮೆಯನ್ನು ಅಂಗೀಕರಿಸಿದ್ದಾರೆ. ಕೇಂದ್ರ ಚುನಾವಣಾ ಆಯೋಗವು ಶೀಘ್ರದಲ್ಲೇ ಚುನಾವಣಾ ದಿನಾಂಕಗಳನ್ನು ಘೋಷಿಸಲಿದೆ. ಅರುಣ್ ಗೋಯಲ್ ಅವರ ಈ ಹೆಜ್ಜೆಯ ನಂತರ ಇದೀಗ ಚುನಾವಣಾ ಆಯೋಗದಲ್ಲಿ 2 ಹುದ್ದೆಗಳು ಖಾಲಿ ಇದೆ.



**■ವಿಜಯಸಾಕ್ಷಿ ಸುದ್ದಿ, ಗದಗ**

ಕಾನೂನು, ನ್ಯಾಯ ಮಾನವ ಹಕ್ಕುಗಳು ಸಂಸದೀಯ ವ್ಯವಹಾರಗಳು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ.ಪಾಟೀಲ ಅವರು ನಗರದ ಸಾರ್ವಜನಿಕ ಮುಸಲ್ಮಾನ ಮಸೂತಿ ಕಿಲ್ಲೆಯ ನೂತನ ಸಮುದಾಯ ಭವನದ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ನಗರಸಭೆ ಸದಸ್ಯರು, ಸಮಾಜದ ಗಣ್ಯರು, ಸಾರ್ವಜನಿಕರು ಉಪಸ್ಥಿತರಿದ್ದರು.

### ಶಿವಾನಂದ ಮಠದ 104ನೇ ಜಾತ್ರಾ ಮಹೋತ್ಸವಕ್ಕೆ ತಹಸೀಲ್ದಾರರಿಂದ ತಡೆಯಾಜ್ಞೆ

# ಉಭಯ ಶ್ರೀಗಳ ಪ್ರತಿಷ್ಠೆಗೆ 'ಚಲಿಸದ ತೇರು'

**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಶಿವಾನಂದ ಮಠದ ಹಿರಿಯ ಹಾಗೂ ಕಿರಿಯ ಶ್ರೀಗಳ ನಡುವಿನ ಹಗ್ಗ ಜಗ್ಗಾಟಕ್ಕೆ ಶನಿವಾರ ನಡೆಯಬೇಕಿದ್ದ 104ನೇ ವರ್ಷದ ಜಾತ್ರಾ ಮಹೋತ್ಸವ ರದ್ದುಗೊಂಡಿತು. ಆ ಮೂಲಕ 104 ವರ್ಷಗಳ ಇತಿಹಾಸದ ಶಿವಾನಂದ ಬೃಹನ್ಮಠದಲ್ಲಿ ಪ್ರಥಮ ಬಾರಿಗೆ ಶಿವರಾತ್ರಿಯ ಕಾರ್ಯಕ್ರಮಗಳು, ಅಡ್ಡಪಲ್ಲಕ್ಕಿ ಉತ್ಸವಗಳು ನಡೆಯದೆ, ರಥವೂ ಚಲಿಸದೆ ಸಾವಿರಾರು ಭಕ್ತಾದಿಗಳ




ಭಕ್ತಿಯನ್ನು ಮೊಟಕುಗೊಳಿಸಿತು.



ಸಮಾಜಕ್ಕೆ ಬುದ್ಧಿ ಹೇಳಬೇಕಾದ ಪೀಠಾಧಿಪತಿಗಳೇ ಹೀಗೆ ಒಣ ಪ್ರತಿಷ್ಠೆಯ ಕಾರಣಕ್ಕೆ ಶ್ರೀಮಠದ ಸಂಪ್ರದಾಯಕ್ಕೆ ಧಕ್ಕೆ ತಂದಿರುವುದು ನೋವು ತಂದಿದೆ. ಉಭಯ ಶ್ರೀಗಳಿಗೆ ಎಷ್ಟೇ ಮನವರಿಕೆ ಮಾಡಿದರೂ ತಮ್ಮ ಹಟ ಬಿಡದ ಕಾರಣ ಇವತ್ತು ಭಕ್ತರು ಸಂಕಷ್ಟ ಎದುರಿಸಬೇಕಾಗಿದೆ. ಶತಮಾನದ ಇತಿಹಾಸ ಹೊಂದಿರುವ ಶ್ರೀಮಠದಲ್ಲಿ ಕೇವಲ ಒಣ ಪ್ರತಿಷ್ಠೆಗೆ ಸಂಪ್ರದಾಯ ಬಲಿಯಾಗಿರುವುದು ನೋವು ತಂದಿದೆ ಎಂದು ಹಲವು ಭಕ್ತರು ಬೇಸರ ವ್ಯಕ್ತಪಡಿಸಿದರು.

> ಮಠದ ಹಿರಿಯ ಶ್ರೀಗಳು ಕೆಲ ಪಟ್ಟಭದ್ರ ಹಿತಾಸಕ್ತಿಗಳ ಕೈಗೊಂಬೆಯಾಗಿ ವರ್ತಿಸಿ ಮಠದ ಪರಂಪರೆ ಹಾಳು ಮಾಡಿದ್ದಾರೆ. ಶುಕ್ರವಾರ ಸಂಜೆ ಪತ್ರಿಕಾಗೋಷ್ಠಿಯಲ್ಲಿ ಕಿರಿಯ ಶ್ರೀಗಳೊಂದಿಗೆ ಸಾನಿಧ್ಯ ವಹಿಸುವದಾಗಿ ಹೇಳಿ, ನಂತರ ಹೇಳಿಕೆ ಬದಲಿಸಿರುವದು ಸರಿಯಲ್ಲ. ಹಿರಿಯ ಶ್ರೀಗಳು ಇತರರ ಮಾತುಗಳನ್ನು ಕೇಳಿ ಸಲ್ಲದ ವಿವಾದಕ್ಕೆ ದಾರಿ ಮಾಡಿಕೊಡದೆ ಕಿರಿಯ ಶ್ರೀಗಳೊಂದಿಗೆ ಸಮಾಜಕ್ಕೆ ಮಾರ್ಗದರ್ಶಕರಾಗಬೇಕು. ಜಾತ್ರಾ ಮಹೋತ್ಸವದ ಹೆಸರಿನಲ್ಲಿ ಜಾತ್ರೆ ಸಮಿತಿ ಪದಾಧಿಕಾರಿಗಳು ಸಂಗ್ರಹಿಸಿದ ಹಣಕಾಸು, ದವಸ-ಧಾನ್ಯಗಳು, ಇತರೆ ವಸ್ತುಗಳ ಬಗ್ಗೆ ಸಮಸ್ತ ಭಕ್ತರ ಸಭೆ ಕರೆದು ಲೆಕ್ಕ ಒಪ್ಪಿಸಿ ಸಮಿತಿ ವಿಸರ್ಜಿಸಬೇಕು. ಪುನಃ ಮುಂದಿನ ವರ್ಷ ಹೊಸದಾಗಿ ಸಮಸ್ತ ಭಕ್ತರ ಸಮ್ಮುಖದಲ್ಲಿ ಜಾತ್ರಾ ಸಮಿತಿ ರಚಿಸಬೇಕು.
>
> – ರಾಜೂ ಖಾನಪ್ಪನವರ.
> ರಾಜ್ಯ ಸಂಚಾಲಕ, ಹಿಂದೂ ವೀರಶೈವ-ಲಿಂಗಾಯತ ಯುವ ವೇದಿಕೆ.




ಉತ್ತರಾಧಿಕಾರತ್ವ ವಿಚಾರವಾಗಿ ಹೈಕೋರ್ಟ್ ಮಧ್ಯಂತರ ಸೂಚನೆ ಪಾಲನೆ ವಿಷಯವಾಗಿ ಉಭಯ ಶ್ರೀಗಳ ಮಧ್ಯೆ ಒಮ್ಮತ ಮೂಡದ ಕಾರಣ, ಗದಗ ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ ರಥೋತ್ಸವ, ಅಡ್ಡಪಲ್ಲಕ್ಕಿ ಸೇರಿದಂತೆ ಜಾತ್ರಾ ಮಹೋತ್ಸವದ ಎಲ್ಲ ಧಾರ್ಮಿಕ ಚಟುವಟಿಕೆಗಳನ್ನು ನಿರ್ಬಂಧಿಸಿ ಆದೇಶ ಹೊರಡಿಸಿದ್ದಾರೆ.

▶▶ 3ನೇ ಪುಟಕ್ಕೆ


### ಮಾಜಿ ಶಾಸಕ 'ಸಿ.ಎಸ್. ಮುತ್ತಿನಪೆಂಡಿಮಠ ಮಾರ್ಗ' ನಾಮಕರಣ ಮಾಡಿದ ಸಚಿವ ಎಚ್.ಕೆ. ಪಾಟೀಲ

# ಮುತ್ತಿನಪೆಂಡಿಮಠರದ್ದು ಉದಾತ್ತ ವ್ಯಕ್ತಿತ್ವ

**■ವಿಜಯಸಾಕ್ಷಿ ಸುದ್ದಿ, ಗದಗ**

ಮಾಜಿ ಶಾಸಕ ಸಿ.ಎಸ್. ಮುತ್ತಿನಪೆಂಡಿಮಠ ಅವರ ರಾಜಕೀಯ ಜೀವನ ನಂತರದ ಒಡನಾಟ-ಬಾಂಧವ್ಯ ಅನ್ಯೋನ್ಯವಾಗಿತ್ತು. ಅವರೊಂದಿಗೆ ಡಿ.ಆರ್. ಪಾಟೀಲ ಒಡನಾಟ ಸ್ನೇಹ-ಸಂಬಂಧ ಉತ್ತಮವಾಗಿತ್ತು. ಅವರ ತತ್ವ-ಸಿದ್ಧಾಂತಗಳು ಉದಾತ್ತವಾಗಿದ್ದವು. ರಾಜಕಾರಣದಲ್ಲಿ ಸಕ್ರಿಯವಾಗಿ ಸ್ವಲ್ಪದಿನ ಇದ್ದರೂ ಸಹ ಜನಬಲ ಗಳಿಸಿಕೊಂಡಿದ್ದರು. ಅವರದ್ದು ಸ್ನೇಹಪರ ಬದುಕಾಗಿತ್ತು. ಅವರ ಸಂಸ್ಕೃತಿ, ಮೇಲುಸ್ಥರದ ವ್ಯಕ್ತಿತ್ವ ಎಲ್ಲರನ್ನೂ ಸೆಳೆಯುತ್ತಿತ್ತು ಎಂದು ಕಾನೂನು, ನ್ಯಾಯ ಮಾನನ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಎಚ್.ಕೆ. ಪಾಟೀಲ ನುಡಿದರು.

ಸಿ.ಎಸ್. ಮುತ್ತಿನಪೆಂಡಿಮಠ ಪ್ರತಿಷ್ಠಾನ, ಗದಗ-ಬೇಟಗೇರಿ ನಗರಸಭೆ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಜಗಜ್ಯೋತಿ ಬಸವೇಶ್ವರರ ಮೂರ್ತಿಗೆ ತೆರಳುವ ಮುಖ್ಯದ್ವಾರದ ರಸ್ತೆಗೆ ಮಾಜಿ ಶಾಸಕ ಸಿ.ಎಸ್. ಮುತ್ತಿನಪೆಂಡಿಮಠ ಅವರ ಹೆಸರನ್ನು ನಾಮಕರಣ ನೆರವೇರಿಸಿ ಸಚಿವರು ಮಾತನಾಡಿದರು.




ಗದಗ-ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಈ ರಸ್ತೆಗೆ ಸಿ.ಎಸ್. ಮುತ್ತಿನಪೆಂಡಿಮಠ ಹೆಸರಿಡಲು ನಗರಸಭೆಯಲ್ಲಿ ಸರ್ವಾನುಮತದಿಂದ ಒಪ್ಪಿ ಅಂಗಿಕರಿಸಲಾಗಿದೆ. ಅವರು ಎರಡು ಬಾರಿ ಶಾಸಕರಾಗಿ ಉತ್ತಮ ಕಾರ್ಯಗಳ ಮೂಲಕ ಗಮನ ಸೆಳೆದಿದ್ದಾರೆ. ಉತ್ತಮ ಕಾರ್ಯಗಳ ಮೂಲಕ ಜನಮಾನಸದಲ್ಲಿ ಇಂದಿಗೂ ಅವರು ಅಜರಾಮರರಾಗಿದ್ದಾರೆ ಎಂದರು.

ಪ್ರತಿಷ್ಠಾನದ ಅಧ್ಯಕ್ಷ ವಸಂತ ಮೇಟಿ ಹೇಳಿದಂತೆ ಅವರ ಪುತ್ಥಳಿ ಸ್ಥಾಪನೆ ಬಗ್ಗೆ ಮುಂದಿನ ದಿನಗಳಲ್ಲಿ ಕ್ರಮ ವಹಿಸಲಾಗುವುದು. ಈ ರಸ್ತೆಗೆ ಅವರ ಹೆಸರು ಅಂತ್ಯತ ಸಮಂಜಸವಾಗಿದೆ. ಇದು ಪ್ರವಾಸಿ ತಾಣವಾಗಿ ಎಲ್ಲರನ್ನು ಸೇಳೆಯಲಿದೆ ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಮಾಜಿ ಸಚಿವ ಎಸ್.ಎಸ್. ಪಾಟೀಲ ಮಾತನಾಡಿ, ಸಿ.ಎಸ್. ಮುತ್ತಿನಪೆಂಡಿಮಠ ಅವರು ವಕೀಲರಾಗಿ ಜನಸೇವೆ ಮಾಡಿದ್ದಾರೆ. ನಾನು ಶಾಸಕನಾಗಲು ಪ್ರಮುಖ ಕಾರಣ ಸಿ.ಎಸ್. ಮುತ್ತಿನಪೆಂಡಿಮಠ ಎಂದರೆ ತಪ್ಪಾಗದು. ಗದಗ ಜಿಲ್ಲೆಯ ನೀರಿನ ಬವಣೆ ತೀರಿಸಿದ ಭಗೀರಥ ಸಚಿವ ಎಚ್.ಕೆ. ಪಾಟೀಲ ಎಂದು ಹೇಳಿದರು.

ತೋಂಟದಾರ್ಯ ಮಠದ ಸಿದ್ಧರಾಮ ಶ್ರೀಗಳು ಸಾನಿಧ್ಯ ವಹಿಸಿ ಆಶೀರ್ವಚನ ನೀಡುತ್ತಾ, ಜನಸೇವೆ, ನ್ಯಾಯವಾದಿಗಳಾಗಿ ಮಾಡಿದ ಅವರ ಸೇವೆ ಅಗಾಧವಾದದು. ನಾಡನ್ನು ಸಮೃದ್ಧವಾಗಿ ಕಟ್ಟಲು ಮುತ್ತಿನಪೆಂಡಿಮಠ ಅಂತವರು ಮತ್ತೆ ಮತ್ತೆ ಹುಟ್ಟಿ ಬರಬೇಕು. ಸಾರ್ವಜನಿಕರ ಸೇವೆಯಲ್ಲಿ ಕೆಲಸ ಮಾಡುವಾಗ ಅನೇಕ ವಿರೋಧ ಕಟ್ಟಿಕೊಳ್ಳಬೇಕಾಗುತ್ತದೆ. ಆದರೆ, ಸಿ.ಎಸ್. ಮುತ್ತಿನಪೆಂಡಿಮಠ ಸಮಾಜದ ಏಳ್ಗೆಗೆ ತಮ್ಮ ಜೀವನವನ್ನೇ ಮುಡಿಪಾಗಿಟ್ಟ ವ್ಯಕ್ತಿಯಾಗಿದ್ದರು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸದಸ್ಯರಾದ ಎಲ್.ಡಿ. ಚಂದಾವರಿ, ಪದ್ಮಾ ಕಟಗಿ, ಅನಿಲ ಅಬ್ಬಿಗೇರಿ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಂ.ಐ. ಹಿರೆಮನಿ ಪಾಟೀಲ, ಡಾ. ಎಂ.ಬಿ. ಪಾಟೀಲ, ವಿಶ್ವನಾಥ ಪಾಟೀಲ, ಪ್ರತಿಷ್ಠಾನದ ಅಧ್ಯಕ್ಷ ವಸಂತ ಮೇಟಿ ಹಾಜರಿದ್ದರು.

### ಕಾಂಗ್ರೆಸ್ ನಿಷ್ಠಾವಂತನಿಗೆ ಒಲಿದ ಹಾವೇರಿ ಕ್ಷೇತ್ರದ ಸ್ಪರ್ಧೆ | ಅಚ್ಚರಿ ಮೂಡಿಸಿದ ಆಯ್ಕೆ


# ಆನಂದಸ್ವಾಮಿ ಗಡ್ಡದೇವರಮಠ 'ಕೈ'ಗೆ ಟಿಕೆಟ್

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ/ಗದಗ**

ಎಐಸಿಸಿ ಶುಕ್ರವಾರ ಬಿಡುಗಡೆಗೊಳಿಸಿರುವ 39 ಲೋಕಸಭಾ ಕ್ಷೇತ್ರಗಳ ಪೈಕಿ ರಾಜ್ಯದ ಹಾವೇರಿ ಲೋಕಸಭೆ ಕ್ಷೇತ್ರದ ಅಭ್ಯರ್ಥಿಯಾಗಿ ಜಿಲ್ಲೆಯ ಲಕ್ಷ್ಮೇಶ್ವರ ಪಟ್ಟಣದ ಆನಂದಸ್ವಾಮಿ ಗಡ್ಡದೇವರಮಠ ಅಧಿಕೃತವಾಗಿ ಸ್ಥಾನ ಪಡೆದುಕೊಂಡಿದ್ದಾರೆ.

ಈ ಹಿಂದೆ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರ ಹೆಸರು ಕೇಳಿ ಬಂದಿತ್ತಾದರೂ, ಮಾಜಿ ಸಚಿವ ಹಾಗೂ ಬ್ಯಾಡಗಿ ಶಾಸಕ ಬಸವರಾಜ ಶಿವಣ್ಣನವರ, ಮಾಜಿ ಸಂಸದ ಮಂಜುನಾಥ ಕುಣ್ಣೂರ ಸೇರಿ ಹಲವಾರು ಘಟಾನುಘಟಿ ಆಕಾಂಕ್ಷಿಗಳ ನಡುವೆ ಹಾವೇರಿ ಲೋಕಸಭಾ ಟಿಕೆಟ್ ಪಡೆದುಕೊಳ್ಳುವಲ್ಲಿ ಆನಂದಸ್ವಾಮಿ ಗಡ್ಡದೇವರಮಠ ಯಶಸ್ವಿಯಾಗಿದ್ದಾರೆ.

ಕಾಂಗ್ರೆಸ್‌ನ ಯುವ ಮುಖಂಡರಾಗಿರುವ ಆನಂದಸ್ವಾಮಿ



ಗಡ್ಡದೇವರಮಠ ಅವರು ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠರ ಪುತ್ರರಾಗಿದ್ದು, ರಾಜಕೀಯ ಕುಟುಂಬದ ಹಿನ್ನೆಲೆಯನ್ನು ಹೊಂದಿದ್ದಾರೆ. ಬಿಎಸ್‌ಸಿ ಪದವಿಧರರಾಗಿರುವ ಆನಂದಸ್ವಾಮಿ ಗಡ್ಡದೇವರಮಠ 1998ರಲ್ಲಿ ಕರ್ನಾಟಕ ವಿಶ್ವವಿದ್ಯಾಲಯದ ಸೆನೆಟ್ ಸದಸ್ಯರಾಗಿ, 2008ರಲ್ಲಿ ರಾಜ್ಯ ಯುವ ಕಾಂಗ್ರೆಸ್‌ನ ಪ್ರಧಾನ ಕಾರ್ಯದರ್ಶಿಯಾಗಿ, 2019ರಲ್ಲಿ ಕೆಪಿಸಿಸಿ ಪ್ರಚಾರ ಸಮಿತಿ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸಿದ್ದಾರೆ.

> ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿ ನಾನು ಮತ್ತು ನನ್ನ ತಂದೆ ಸಲ್ಲಿಸಿದ ಸೇವೆ ಪರಿಗಣಿಸಿ ಹಾವೇರಿ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯಾಗಿ ಆಯ್ಕೆ ಮಾಡಿರುವುದು ಸಂತಸ ತಂದಿದೆ. ಕ್ಷೇತ್ರದ ಎಲ್ಲ ಶಾಸಕರ, ಹಿರಿಯರ, ಮತದಾರರ ಮನ ಗೆದ್ದು, ಗೆಲುವು ಸಾಧಿಸುವ ಮೂಲಕ ಪಕ್ಷ ನನ್ನ ಮೇಲೆ ಇಟ್ಟ ನಂಬಿಕೆ ಉಳಿಸಿಕೊಳ್ಳುತ್ತೇನೆ.
>
> – ಆನಂದಸ್ವಾಮಿ ಗಡ್ಡದೇವರಮಠ.

2011ರಲ್ಲಿ ವಿಧಾನ ಪರಿಷತ್ ಚುನಾವಣೆಯಲ್ಲಿ ಸ್ಪರ್ಧಿಸಿ ಪರಾಭವಗೊಂಡಿದ್ದರೂ ಜಿಲ್ಲೆಯ ಸಕ್ರಿಯ ರಾಜಕಾರಣದಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದರು. ಮಾಜಿ ಸಂಸದ ಮಂಜುನಾಥ ಕುಣ್ಣೂರ, ಕೆಪಿಸಿಸಿ ಪದವೀಧರ ಘಟಕದ ರಾಜ್ಯಾಧ್ಯಕ್ಷ ಡಾ. ಆರ್.ಎಂ. ಕುಬೇರಪ್ಪ, ಮಾಜಿ ಸಚಿವ ಬಸವರಾಜ ಶಿವಣ್ಣನವರ, ಹಾವೇರಿ ನಗರಸಭೆ ಮಾಜಿ ಅಧ್ಯಕ್ಷ ಸಂಜೀವಕುಮಾರ ನೀರಲಗಿ ಅವರು ಆಕಾಂಕ್ಷಿಗಳ ಪಟ್ಟಿಯಲ್ಲಿದ್ದರು.

ಹಾವೇರಿ ಲೋಕಸಭೆ ಕ್ಷೇತ್ರದ ಕಾಂಗ್ರೆಸ್ ಸಂಭಾವ್ಯ ಅಭ್ಯರ್ಥಿಗಳ ಪಟ್ಟಿಯಲ್ಲಿ ಆನಂದಸ್ವಾಮಿ ಗಡ್ಡದೇವರಮಠ ಸೇರಿದಂತೆ ಸಚಿವ ಎಚ್.ಕೆ. ಪಾಟೀಲ, ವಿ.ಪ ಸದಸ್ಯ ಸಲೀಂ ಅಹ್ಮದ್, ರೋಣದ ಐ.ಎಸ್. ಪಾಟೀಲ ಹೆಸರು ಕೇಳಿಬಂದಿತ್ತು. ಅಂತಿಮವಾಗಿ ಆನಂದಸ್ವಾಮಿ ಟಿಕೆಟ್ ಗಿಟ್ಟಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಹಾವೇರಿ ಕ್ಷೇತ್ರವು ಗದಗ ಜಿಲ್ಲೆಯ 3 ಹಾಗೂ ಹಾವೇರಿ ಜಿಲ್ಲೆಯ 5 ವಿಧಾನಸಭೆ ಕ್ಷೇತ್ರಗಳನ್ನು ಒಳಗೊಂಡ ಸಂಕೀರ್ಣ ಲೋಕಸಭಾ ಕ್ಷೇತ್ರವಾಗಿದೆ. ಸದ್ಯ ಒಟ್ಟು 8 ವಿಧಾನಸಭೆ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಶಿರಹಟ್ಟಿ ಮೀಸಲು ಕ್ಷೇತ್ರ ಹೊರತುಪಡಿಸಿ ಇನ್ನುಳಿದ 7 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಶಾಸಕರಿದ್ದಾರೆ. ಆನಂದಸ್ವಾಮಿ ಅವರ ತಂದೆ ಜಿ.ಎಸ್. ಗಡ್ಡದೇವರಮಠ ಅವರು ಸತತ ಎರಡು ಬಾರಿ ಶಿರಹಟ್ಟಿ ಕ್ಷೇತ್ರದ ಶಾಸಕರಾಗಿದ್ದರು. ಸದ್ಯ ಶಿರಹಟ್ಟಿ ಕ್ಷೇತ್ರದ ಯುವ ನಾಯಕ ಆನಂದಸ್ವಾಮಿ ಗಡ್ಡದೇವರಮಠ ಕಾಂಗ್ರೆಸ್ ಅಭ್ಯರ್ಥಿಯಾಗಿರುವುದು ಅಚ್ಚರಿ ಮೂಡಿಸಿದೆ.

## 'ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ' ನಾಳೆ




**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದ ವತಿಯಿಂದ ಮಾ.11ರಂದು ಬೆಳಿಗ್ಗೆ 11 ಗಂಟೆಗೆ ಕೆ.ಎಚ್. ಪಾಟೀಲ ಸಭಾಭವನದಲ್ಲಿ 'ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ' ಹಮ್ಮಿಕೊಳ್ಳಲಾಗಿದೆ ಎಂದು ಸಂಸ್ಥೆಯ ಅಧ್ಯಕ್ಷೆ ಸುವರ್ಣ ಮದರಿಮಠ ಹೇಳಿದರು.

ಶನಿವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜ.ಡಾ. ತೋಂಟದ ಸಿದ್ಧರಾಮ ಶ್ರೀಗಳ ಸಾನ್ನಿಧ್ಯದಲ್ಲಿ ಕಾರ್ಯಕ್ರಮ ನಡೆಯಲಿದೆ. ಹೈಟೆಕ್ ಮ್ಯಾಗನೇಟಿಕ್ ಎಲೆಕ್ಟ್ರಾನಿಕ್ ಪ್ರೈ. ಲಿಂ. ಬೆಂಗಳೂರಿನ ವ್ಯವಸ್ಥಾಪಕ ನಿರ್ದೇಶಕಿ ಉಮಾ ರೆಡ್ಡಿ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಜಿಲ್ಲಾಕಾರಿ ವೈಶಾಲಿ ಎಂ.ಎಲ್., ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಈಶ್ವರಪ್ಪ ಮುನವಳ್ಳಿ, ಡ್ರೀಮ್ಸ್ ಇವೆಂಟ್ ಕಂಪನಿ ವ್ಯವಸ್ಥಾಪಕ ನಿರ್ದೇಶಕಿ ಶೀತಲ ಚಿಲುಮ್ಮೆ ಆಗಮಿಸಲಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ವ್ಯಾಪಾರ, ಉದ್ಯಮ ಕ್ಷೇತ್ರದಲ್ಲಿ ವಿಶಿಷ್ಠ ಸಾಧನೆ ಮಾಡಿದ ಮೆಜಿಥಿಯಾ ಫೌಂಡೇಶನ್ ಹುಬ್ಬಳ್ಳಿಯ ರಮಿಲಾ ಮೆಜಿಥಿಯಾ, ಸುವಿಜಯ ಅಗ್ರಿವೆಂಚರ್ ಗದಗನ ಜಯಶ್ರೀ ಹುಬ್ಬಳ್ಳಿ, ಅಭಿಯಾನ ಟ್ರೇಡಿಂಗ್ ಕಂಪನಿಯ ಮಂಗಲಾ ಯಳಮಲಿ ಅವರನ್ನು ಸನ್ಮಾನಿಸಲಾಗುವುದು ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಸಂಸ್ಥೆಯ ಪದಾಧಿಕಾರಿಗಳಾದ ಜಯಶ್ರೀ ಹುಬ್ಬಳ್ಳಿ, ವೀಣಾ ಪೋತ್ನಿಸ್, ಜ್ಯೋತಿ ದಾನಪ್ಪಗೌಡ್ರ, ಸುಜಾತಾ ಗುಡಿಮನಿ, ಭಾಗ್ಯಶ್ರೀ ಕುರುಡಗಿ, ಸುರೇಖಾ ಮಲ್ಲಾಡದ, ಸುಷ್ಮಾ ಜಾಲಿ ಮುಂತಾದವರಿದ್ದರು.

## ಸಾಕ್ಷಿ ಸುಭಾಷಿತ

ದೇವರ ನುಡಿಯನ್ನು ನಿಮ್ಮ ಕಿವಿಯಿಂದಲ್ಲ
ಹೃದಯದಿಂದ ಕೇಳಿಸಿಕೊಳ್ಳಿ
–ಸುಭಾಷಿತ

## ಸಂಪಾದಕೀಯ

# ಲೋಕಸಭೆ ಚುನಾವಣೆ; ಮೊದಲ ದಾಳ ಉರುಳಿಸಿದ ಕಾಂಗ್ರೆಸ್

ಲೋಕಸಭೆ ಚುನಾವಣೆಗೆ ಅಧಿಸೂಚನೆ ಹೊರಬಿಳದಿದ್ದರೂ ಕಾಂಗ್ರೆಸ್ ತನ್ನ ಮೊದಲ ಪಟ್ಟಿಯನ್ನು ಬಿಡುಗಡೆ ಮಾಡುವ ಮೂಲಕ, ಮೊದಲ ದಾಳವನ್ನು ಉರುಳಿಸಿದೆ.

ಕರ್ನಾಟಕದ ಏಳು ಕ್ಷೇತ್ರಗಳು ಸೇರಿದಂತೆ ದೇಶದ ಒಟ್ಟು 39 ಲೋಕಸಭೆ ಕ್ಷೇತ್ರಗಳ ಅಭ್ಯರ್ಥಿಗಳ ಹೆಸರನ್ನ ಕಾಂಗ್ರೆಸ್ ಅಂತಿಮಗೊಳಿಸಿದೆ. ನಿರೀಕ್ಷೆಯಂತೆ ರಾಹುಲ್ ಗಾಂಧಿ ಕೇರಳದ ವೈನಾಡು ಕ್ಷೇತ್ರದಿಂದ ಸ್ಪರ್ಧಿಸಲಿದ್ದಾರೆ.

ಕರ್ನಾಟಕದ ಏಳು ಕ್ಷೇತ್ರಗಳ ಕಾಂಗ್ರೆಸ್ ಅಭ್ಯರ್ಥಿಗಳ ಪಟ್ಟಿಯು ಪ್ರಕಟವಾಗಿದೆ. ಸಾಕಷ್ಟು ಅಳೆದು ತೂಗಿ ಕಾಂಗ್ರೆಸ್ ತನ್ನ ಮೊದಲ ಪಟ್ಟಿಯನ್ನು ಬಿಡುಗಡೆಗೊಳಿಸಿದೆ. ಮೊದಲ ಪಟ್ಟಿಗೆ ಹೇಳಿಕೊಳ್ಳುವಂತಹ ಯಾವುದೇ ಅಪಸ್ವರಗಳು ಈವರೆಗೂ ಬಂದಿಲ್ಲ. ಹೀಗಾಗಿ ಮೊದಲ ಪಟ್ಟಿ ಸಕ್ಸಸ್ ಎನ್ನಬಹುದು.

ಆಡಳಿತರೂಢ ಬಿಜೆಪಿಗೆ ಹೋಲಿಕೆ ಮಾಡಿದರೆ ಕಾಂಗ್ರೆಸ್ ಪಟ್ಟಿ ಬಿಡುಗಡೆಯಲ್ಲಿ ಮುಂದಿದೆ. ಆಡಳಿತ ಪಕ್ಷದ ಅಭ್ಯರ್ಥಿಗಳ ಪಟ್ಟಿ ಬಿಡುಗಡೆ ಮಾಡಿದ ನಂತರ, ಕಾಂಗ್ರೆಸ್ ತನ್ನ ಅಭ್ಯರ್ಥಿಗಳನ್ನು ಅಂತಿಮಗೊಳಿಸಲಿದೆ ಎನ್ನುವ ಲೆಕ್ಕಾಚಾರವಿತ್ತು.

ಆದರೆ ಪ್ರತಿಪಕ್ಷಗಳು ತಮ್ಮ ಅಭ್ಯರ್ಥಿಗಳನ್ನ ಅಂತಿಮಗೊಳಿಸುವ ಮುನ್ನವೇ ಕಾಂಗ್ರೆಸ್ ಅಧಿಕೃತವಾಗಿ ತನ್ನ ಪಟ್ಟಿ ಬಿಡುಗಡೆ ಮಾಡಿ ಅಚ್ಚರಿ ಮೂಡಿಸಿದೆ. ಕಾಂಗ್ರೆಸ್ ಪಟ್ಟಿ ಬಿಡುಗಡೆಯಾಗುತ್ತಿದ್ದಂತೆ ಬಿಜೆಪಿಯಲ್ಲಿ ಚಟುವಟಿಕೆಗಳು ಬಿರುಸುಗೊಂಡಿವೆ.

ರಾಷ್ಟ್ರೀಯ ಮಟ್ಟದಲ್ಲೂ ಸಾಕಷ್ಟು ಚರ್ಚೆಯಾಗಿ ಇನ್ನೆರಡು ದಿನದಲ್ಲಿ ಬಿಜೆಪಿ ಪಟ್ಟಿಯು ಅಂತಿಮಗೊಳಿಸುವ ನಿರ್ಧಾರಕ್ಕೆ ಬಿಜೆಪಿ ಬಂದಿದೆ. ಚುನಾವಣಾ ಪೂರ್ವ ಸಮೀಕ್ಷೆಗಳು ಏನೇ ಇದ್ದರೂ, ಕಾಂಗ್ರೆಸ್ ಸಾಕಷ್ಟು ಮುಂಚಿತವಾಗಿ ಅಭ್ಯರ್ಥಿಗಳನ್ನ ಘೋಷಣೆ ಮಾಡಿ ಅಚ್ಚರಿ ಮೂಡಿಸಿರುವುದಂತೂ ನಿಜ.

ಕಾಂಗ್ರೆಸ್ ನಡೆಯಿಂದ ಎಚ್ಚೆತ್ತ ಬಿಜೆಪಿ, ಕನಿಷ್ಠ ಒಂದು ನೂರು ಕ್ಷೇತ್ರಗಳ ಅಭ್ಯರ್ಥಿಗಳ ಪಟ್ಟಿಯನ್ನು ಆದರೂ ಬಿಡುಗಡೆ ಮಾಡಿ ತಿರುಗೇಟು ನೀಡುವ ಸಿದ್ಧತೆಯಲ್ಲಿದೆ. ಇನ್ನೆರಡು ದಿನದಲ್ಲಿ ಬಿಜೆಪಿ ಪಟ್ಟಿಯನ್ನು ನಿರೀಕ್ಷಿಸಬಹುದು.

### ಸಾಧಕಿ ಡಾ. ಮಹಾಜಬೀನ್ ಮಧುರಕರ್‌ಗೆ 'ಶ್ರೀ ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿ'

# ಬಡವರ ಬದುಕಿನ ಚೈತನ್ಯ

ಬದುಕಿನಲ್ಲಿ ಬೆಳೆಯುವ ಛಲ ಒಂದಿದ್ದರೆ ಏನಾದರೂ ಸಾಧನೆ ಮಾಡಲು ಸಾಧ್ಯ ಎಂಬುದನ್ನು ಅಕ್ಷರಶಃ ನಿರೂಪಿಸಿದವರು ಬಾಗಲಕೋಟೆಯ ಹೆಸರಾಂತ ಚರ್ಮರೋಗ ತಜ್ಞ ವೈದ್ಯರಾಗಿರುವ ಡಾ. ಮಹಾಜಬೀನ್ ಮಧುರಕರ್. ವಿಜಯಪುರ ಜಿಲ್ಲೆಯ ರಾಮಪುರ ಗ್ರಾಮದಲ್ಲಿ 19–11–1986ರಂದು ಮಧ್ಯಮ ವರ್ಗದ ಮುಸ್ಲಿಂ ಕುಟುಂಬದಲ್ಲಿ ಜನಿಸಿದ ಮಹಾಜಬೀನ್‌ರವರು ನಿವೃತ್ತ ಕರಣಿಕರಾದ ಶ್ರೀ ಸಾಹೇಬ್ ಪಟೇಲ್ ಬಿ. ಮದರ್ಕರ್ ಮತ್ತು ಗೃಹಿಣಿ ಶಹಪುರಿ ಬೇಗಂ ಅವರ ಆರನೇಯ ಮಗಳು.

ಬಾಲ್ಯದಿಂದಲೇ ಗಾಲಿ ಕುರ್ಚಿಗೆ ಸೀಮಿತವಾಗಿ ಎಲ್ಲರಂತೆ ಬೆಳೆಯದೇ ತುಸು ವಿಭಿನ್ನವಾಗಿ ಬೆಳೆದು ನಿಂತಿದ್ದು ಸಾಹಸವೇ ಸರಿ. ತಂದೆ–ತಾಯಿಯ ಮುದ್ದಿನ ಮಗಳಾಗಿ, ಮೂರು ವರ್ಷದವರಿದ್ದಾಗ ಇದ್ದಕ್ಕಿಂತೆಯೇ ವ್ಯಾಪಕ ಜ್ವರಕ್ಕೆ ತುತ್ತಾಗಿ, ವೈದ್ಯರ ನಿರ್ಲಕ್ಷ್ಯವೋ, ವಿಧಿಯ ಆಟವೋ, ಔಷಧಿಯ ಅಸ್ಪಂದನೆಯೋ ಯಾರಿಗೂ ತಿಳಿಯದ ಪ್ರಶ್ನೆ. ವೈದ್ಯರ ಚುಚ್ಚುಮದ್ದಿನ ಪರಿಣಾಮ ಜ್ವರ ಉಲ್ಬಣಗೊಂಡು ವಿಧಿಯಾಟಕ್ಕೆ ಬಲಿಯಾಗಿ ಪೋಲಿಯೋ ರೋಗಕ್ಕೆ ತುತ್ತಾಗಬೇಕಾಯಿತು. ಮೂರು ವರ್ಷದ ಮಗುವಿಗೆ ಆದ ದುಷ್ಪರಿಣಾಮ ನೆನೆದ ತಾಯ್ತಂದೆಯರು ಮನದಲ್ಲಿ ಮರುಗುತ್ತ ಬಹಳವೇ ಕಷ್ಟಪಟ್ಟು ಅತ್ಯಂತ ಕ್ರಮಬದ್ಧವಾಗಿ ಜೋಪಾನ ಮಾಡಿ ಬೆಳೆಸಿದರು.

ತನಗಾದ ದೈಹಿಕ ಅಸ್ವಸ್ಥತೆಯನ್ನು ಲೆಕ್ಕಿಸದ ಮಹಾಜಬೀನ್‌ರವರು ತಮ್ಮ ಬುದ್ಧಿವಂತಿಕೆಯಿಂದ ಶಿಕ್ಷಣದಲ್ಲಿ ಅಪಾರ ಪ್ರಮಾಣದ ಏಳ್ಗೆಯನ್ನು ಕಂಡರು. ಪ್ರಾಥಮಿಕ ಶಿಕ್ಷಣವನ್ನು ಆಲಮಟ್ಟಿಯಲ್ಲಿ, ಪ್ರೌಢ ಶಿಕ್ಷಣವನ್ನು ವಿಜಯಪುರದ ಡಿ.ಎನ್.ದರ್ಬಾರ್ ಶಾಲೆಯಲ್ಲಿ ಪೂರ್ಣಗೊಳಿಸಿ ಶೇ.92 ಅಂಕಗಳನ್ನು ಪಡೆದರು. ಸ್ವಾಭಿಮಾನದಿಂದ ಮುನ್ನಡೆದು ವಿಜಯಪುರದಲ್ಲಿ ಮುಂದಿನ ಶಿಕ್ಷಣ ಪಡೆಯಲು ಅನಾನುಕೂಲವಾದಾಗ ಧಾರವಾಡಕ್ಕೆ ಬಂದು ಎಸ್.ಡಿ.ಎಮ್. ಕಾಲೇಜಿನಲ್ಲಿ ವಿಜ್ಞಾನ ವಿಷಯದಲ್ಲಿ ಪದವಿಪೂರ್ವ ಶಿಕ್ಷಣವನ್ನು ಪಡೆದು ತಮ್ಮ ಸಾಮರ್ಥ್ಯವನ್ನು ತೋರಿದವರು.

ಮುಂದೆ ವೈದ್ಯಕೀಯ ರಂಗವನ್ನು ಪ್ರವೇಶ ಮಾಡಿದ ಮಹಾಜಬೀನ್ ಹುಬ್ಬಳ್ಳಿಯ ಕಿಮ್ಸ್‌ನಲ್ಲಿ ಎಮ್.ಬಿ.ಬಿ.ಎಸ್. ಅಧ್ಯಯನ ಆರಂಭಿಸಿದರು. ಹಾಸ್ಟೇಲ್‌ನಲ್ಲಿದ್ದಕೊಂಡು ಸ್ನೇಹಿತರ ಸಹಕಾರಗಳಿಂದ ವಿವಿಧ ಆಯಾಮಗಳಲ್ಲಿ ಕಾರ್ಯನಿರ್ವಹಿಸಿ ಉತ್ತಮ ಗುಣಮಟ್ಟದ



ಶಿಕ್ಷಣ ಪಡೆದರು. ಮಂಗಳೂರಿನ ಫಾದರ್ ಮುಲ್ಲರ್ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಎಮ್.ಡಿ. ಕೋರ್ಸ್ ಸೇರ್ಪಡೆಗೊಂಡು ಚರ್ಮರೋಗ ವಿಭಾಗದಲ್ಲಿ ಸಂಶೋಧನೆ ಕೈಗೊಂಡರು. ಅಧ್ಯಯನ ಸಂದರ್ಭದಲ್ಲಿ ಅನೇಕ ರೋಗಿಗಳ ಚರ್ಮಕಾಯಿಲೆಯನ್ನು ಗುಣಮುಖಗೊಳಿಸುವಲ್ಲಿ ಯಶಸ್ವಿಯಾದ ಮಹಾಜಬೀನ್ ಎಲ್ಲರ ಮೆಚ್ಚಿನವರಾದರು. ಇವರಿಂದ ಏನೂ ಮಾಡಲು ಸಾಧ್ಯವಿಲ್ಲ ಎಂದವರ ಮುಂದೆಯೇ ಏನೆಲ್ಲ ಸಾಧನೆ ಮಾಡಿ ತೋರಿಸಿದರು.

ತಮ್ಮ ಸಂಕಲ್ಪ ಮತ್ತು ದಿಟ್ಟ ನಡೆಗಳಿಂದ ವಿಕಲಾಂಗತೆಯನ್ನು ಹೋಗಲಾಡಿಸುವಲ್ಲಿ ಇಂದಿಗೂ ಸಹ ಉಚಿತ ಸೇವೆ ನೀಡುವ ಮುಖಾಂತರ ಲೋಕಪ್ರಖ್ಯಾತರಾಗಿದ್ದಾರೆ. ಬಾಗಲಕೋಟೆಯ ಹೃದಯಭಾಗದಲ್ಲಿ ಮದರಕರ್ ಆಸ್ಪತ್ರೆ ತೆರೆದು ಅನೇಕ ಉಚಿತ ಶಿಬಿರಗಳನ್ನು, ವೈದ್ಯಕೀಯ ತಪಾಸಣೆಗಳನ್ನು ಆಯೋಜಿಸಿ ಅನೇಕರಿಗೆ ಆಶಾಜ್ಯೋತಿಯಾಗಿದ್ದಾರೆ. ಡಾ. ಮಹಾಜಬೀನ್ 'ಮದರಕರ್ ಚಾರಿಟೇಬಲ್ ಫೌಂಡೇಶನ್'ನ ನಿರ್ದೇಶಕರಾಗಿ, ಬೀಳಗಿಯ ಎಸ್. ಆರ್. ಪಾಟೀಲ ಮೆಡಿಕಲ್ ಕಾಲೇಜಿನ ಚರ್ಮರೋಗಶಾಸ್ತ್ರ ವಿಭಾಗದ ಮುಖ್ಯಸ್ಥರಾಗಿ, ಬಾಗಲಕೋಟೆಯ ಎಸ್.ನಿಜಲಿಂಗಪ್ಪ ಮೆಡಿಕಲ್

ವಿಶೇಷ ವಿಕಲ ಚೇತನರಿಗೆ ಮತ್ತು ವಯೋವೃದ್ಧರಿಗಾಗಿ ಮದರಕರ ಚಾರಿಟೇಬಲ್ ಸಂಸ್ಥೆಯನ್ನು ಸ್ಥಾಪಿಸಿ ಅತ್ಯುನ್ನತ ಸ್ತರದ ನೆರವನ್ನು ಚಾಚಿದವರು. ವಿಶೇಷ ಚೇತನರ ಮತ್ತು ವಯೋವೃದ್ಧರ ಸಂಪೂರ್ಣ ಆರೋಗ್ಯ ತಪಾಸಣೆ ಮತ್ತು ಔಷಧೋಪಚಾರಗಳನ್ನು ಬಡವರಿಗೆ ಉಚಿತವಾಗಿ ನೀಡುವುದಲ್ಲದೇ ಸಮಗ್ರ ಆರೋಗ್ಯಯುಕ್ತ ಸಮಾಜ ನಿರ್ಮಾಣ ಮಾಡುವ ಸಂಕಲ್ಪ ತೊಟ್ಟು ಕಾರ್ಯ ನಿರ್ವಹಿಸುತ್ತಿದೆ. ಈಗಾಗಲೇ ಲಕ್ಷಾಂತರ ಜನರ ಬದುಕಿಗೆ ವಿಶೇಷ ಚೈತನ್ಯವಿಟ್ಟು ಆರೋಗ್ಯಪೂರ್ಣ ಬದುಕನ್ನು ನೀಡಿರುವುದು ಸಂತೋಷದ ಸಂಗತಿ.

ಕಾಲೇಜಿನಲ್ಲಿ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ಅವರ ಕಾರ್ಯನಿಷ್ಠೆ ಮತ್ತು ಸೇವಾತತ್ಪರತೆಯನ್ನು ಅವಗಾಹಿಸಿದ ಕರ್ನಾಟಕ ಸರ್ಕಾರ ಅಂಗವಿಲ ದಿನಾಚರಣೆಯಂದು 2014–15ನೇ ಸಾಲಿನ ರಾಜ್ಯಪ್ರಶಸ್ತಿ ನೀಡಿದೆ. ಅಲ್ಲದೇ ನಾಡಿನ ಹಲವಾರು ಮಠ–ಮಾನ್ಯಗಳು, ಸಂಘ–ಸಂಸ್ಥೆಗಳು ಪದವಿ ಪುರಸ್ಕಾರಗಳನ್ನು ನೀಡಿ ಗೌರವಿಸಿವೆ.

ಇದೀಗ, ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠವು ಮಾ. 22ರಂದು ಶ್ರೀಮದ್ರಂಭಾಪುರಿ ವೀರಸಿಂಹಾಸನಾಧೀಶ್ವರ ಶ್ರೀ ಪ್ರಸನ್ನ ರೇಣುಕ ಡಾ. ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರ ದಿವ್ಯ ಸಾನ್ನಿಧ್ಯದಲ್ಲಿ, ನಾಡಿನ ಶ್ರೀಗಳ, ವಿವಿಧ ಗಣ್ಯಮಾನ್ಯ ಪ್ರತಿಷ್ಠಿತ ರಾಜಕೀಯ ಮುತ್ಸದ್ಧಿಗಳ, ಸದ್ಭಕ್ತರ ಸಹಯೋಗದಲ್ಲಿ ಜರುಗುವ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವ ಧರ್ಮ ಸಮಾರಂಭದ ಸುಸಂದರ್ಭದಲ್ಲಿ ಅತ್ಯುನ್ನತವಾದ 'ಶ್ರೀ ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿ' ಪ್ರದಾನ ಮಾಡಲಾಗುತ್ತಿದೆ. ಈ ಪ್ರಶಸ್ತಿಯು ಕಂಚಿನ ಪತ್ರ ಸಮೇತ 1 ಲಕ್ಷ ರೂಪಾಯಿ ನಗದು ಬಹುಮಾನ ಹೊಂದಿದೆ.

**– ಡಾ. ಗುರುಪಾದಯ್ಯ ವೀ. ಸಾಲಿಮಠ.**
ಸವಣೂರು.

## ಸಿದ್ದೇಶ್ವರ ಸ್ವಾಮಿಗಳ ಪ್ರಶಸ್ತಿಗೆ ಅಶೋಕ ಹುಬ್ಬಳ್ಳಿ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ಅಖಿಲ ಕರ್ನಾಟಕ ಬಸವ ಬಳಗ ಬೆಂಗೇರಿ, ಹುಬ್ಬಳ್ಳಿ ಇವರ ವತಿಯಿಂದ ಜ್ಞಾನಯೋಗಾಶ್ರಮ ವಿಜಯಪುರ ಪೂಜ್ಯ ಶ್ರೀ ಸಿದ್ದೇಶ್ವರ ಸ್ವಾಮಿಗಳ ಪುಣ್ಯಾರಾಧನೆ ಪ್ರಯುಕ್ತ ಅತ್ಯುತ್ತಮ ಸಮಾಜ ಸೇವೆಯನ್ನು ಪರಿಗಣಿಸಿ ಶಿರಹಟ್ಟಿಯ ಬೆಸ್ತರ ಸಮಾಜದ ಯುವ ಮುಖಂಡ ಅಶೋಕ ಹುಬ್ಬಳ್ಳಿ ಇವರಿಗೆ ಪೂಜ್ಯ ಶ್ರೀ ಸಿದ್ದೇಶ್ವರ ಸ್ವಾಮಿಗಳ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ

ಮಾ.10ರ ಬೆಳಿಗ್ಗೆ 11 ಗಂಟೆಗೆ ಹುಬ್ಬಳ್ಳಿಯಲ್ಲಿ ನಡೆಯಲಿರುವ ಶ್ರೀಗಳ ಜಯಂತ್ಯುತ್ಸವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾಮ ಮಾಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

## ಬಿಜೆಪಿ ರೈತ ಮೋರ್ಚಾ ಜಿಲ್ಲಾಧ್ಯಕ್ಷರಾಗಿ ಬಸವರಾಜ ಇಟಗಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ತಾಲೂಕಿನ ಸೂರಣಗಿ ಗ್ರಾಮದ ರೈತ ಮುಖಂಡ ಬಸವರಾಜ ಶಿ.ಇಟಗಿ ಅವರನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ಸೂಚನೆ ಮೇರೆಗೆ ಗದಗ ಜಿಲ್ಲಾ ರೈತ ಮೋರ್ಚಾ ಜಿಲ್ಲಾಧ್ಯಕ್ಷರನ್ನಾಗಿ ನೇಮಕ ಮಾಡಿ ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷ ತೋಟಪ್ಪ(ರಾಜು) ಕುರಡಗಿ ನೇಮಕ ಮಾಡಿದ್ದಾರೆ.

### ಹಿರೇಮಠದ ಶ್ರೀ ಗುರು ಪಟ್ಟಾಧಿಕಾರ ಮಹೋತ್ಸವ ಧರ್ಮ ಸಮಾರಂಭಲ್ಲಿ ರಂಭಾಪುರಿ ಶ್ರೀಗಳು

# ಮಠಗಳು ಸಂಸ್ಕಾರ ಕಲಿಸುವ ಆಧ್ಯಾತ್ಮ ಕೇಂದ್ರಗಳು

■ವಿಜಯಸಾಕ್ಷಿ ಸುದ್ದಿ, ಮುದ್ದೇಬಿಹಾಳ

ಜೀವನದ ಉಜ್ವಲ ಭವಿಷ್ಯಕ್ಕೆ ಧರ್ಮಾಚರಣೆ ಅವಶ್ಯಕ. ತತ್ವ ತಳಹದಿಯ ಮೇಲೆ ವೀರಶೈವ ಧರ್ಮ ನಿಂತಿದೆ. ವೀರಶೈವ ಮಠಗಳು ಕಾಲ ಕಾಲದಲ್ಲಿ ಸಂಸ್ಕಾರ, ಸಂಸ್ಕೃತಿ ಕಲಿಸುವ ಆಧ್ಯಾತ್ಮದ ಕೇಂದ್ರಗಳಾಗಿವೆ ಎಂಬುದನ್ನು ಯಾರೂ ಮರೆಯಬಾರದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ತಾಲೂಕಿನ ಕುಂಟೋಜಿ ಹಿರೇಮಠದ ಶ್ರೀ ಗುರು ಪಟ್ಟಾಧಿಕಾರ ಮಹೋತ್ಸವ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯನನ್ನು ಕಾಡುವ ಚಿಂತೆಗಳು ಹಲವಾರು. ಚಿತೆಯಿಂದ ನಿರ್ಜೀವ ವಸ್ತು ಸುಡಬಹುದು. ಆದರೆ ಚಿಂತೆಯಿಂದ ಸಜೀವ ವಸ್ತು ಕೂಡಾ ನಾಶ ಹೊಂದುತ್ತವೆ. ಚಿಂತೆ ಚಿಂತನೆಗೊಂಡಾಗ ಬದುಕು ವಿಸ್ತಾರಗೊಳ್ಳುತ್ತದೆ. ಒಂದೆಡೆ ವೈಚಾರಿಕ ಪ್ರಜ್ಞೆ ಬೆಳೆದರೆ, ಇನ್ನೊಂದೆಡೆ ಸಂಸ್ಕೃತಿ ಸಭ್ಯತೆ ಕಣ್ಮರೆಯಾಗುತ್ತಿವೆ. ಹೊರಗಿನ ಮಾಲಿನ್ಯ ಕಳೆಯಲು ಹೊರಟಿರುವ ಮನುಷ್ಯ ಅಂತರಂಗದಲ್ಲಿಯೇ ಕತ್ತಲೆ ತುಂಬಿಕೊಂಡಿದ್ದಾನೆ. ಬದುಕಿ ಬಾಳುವ ಮನುಷ್ಯನಿಗೆ ಆಹಾರ, ಆರೋಗ್ಯ ಮತ್ತು ಆಧ್ಯಾತ್ಮ ಜ್ಞಾನದ ಅರಿವು ಮುಖ್ಯ. ಜೀವನ ಶಾಶ್ವತವಲ್ಲ. ಮಾಡಿದ ಸತ್ಕಾರ್ಯಗಳು ಶಾಶ್ವತ. ಜಗದಲ್ಲಿ ಒಳ್ಳೆಯದು, ಕೆಟ್ಟದ್ದು ಎರಡೂ ಇವೆ. ಸನ್ಮಾರ್ಗದ ಸತ್ಪಥದಲ್ಲಿ ನಡೆಯುವ ಪ್ರಾಮಾಣಿಕ



ಪ್ರಯತ್ನ ಮಾಡಬೇಕಾಗಿದೆ ಎಂದರು.

ವೀರಶೈವ ಧರ್ಮ ಜೀವನ ವಿಕಾಸಕ್ಕೆ ಅತ್ಯಮೂಲ್ಯವಾದ ಸೂತ್ರಗಳನ್ನು ಕೊಟ್ಟಿದೆ. ಉಗಮ, ಉತ್ಥಾನ, ಪುನರುತ್ಥಾನ ಮತ್ತು ಜಾಗೃತಿ ಎಂಬ ನಾಲ್ಕು ಹಂತಗಳಲ್ಲಿ ವೀರಶೈವ ಧರ್ಮ ಬೆಳೆದುಕೊಂಡು ಬಂದಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರ ಧಾರ್ಮಿಕ ಮತ್ತು ಸಾಮಾಜಿಕ ಚಿಂತನೆಗಳು ಸರ್ವ ಕಾಲಕ್ಕೂ ಅನ್ವಯಿಸುತ್ತವೆ. ಕುಂಟೋಜಿ ಹಿರೇಮಠ ಶ್ರೀ ರಂಭಾಪುರಿ ಪೀಠದ ಶಾಖಾ ಮಠವಾಗಿದೆ. ಇಂದು ಮಠದ ಅಧಿಕಾರ ಸೂತ್ರ ವಹಿಸಿಕೊಂಡಿರುವ ವಿದ್ಯಾ ವಿನಯ ಸಂಪನ್ನರಾದ ಚನ್ನವೀರ ಶಿವಾಚಾರ್ಯ ಸ್ವಾಮಿಗಳು ಈ ಭಾಗದ ಸರ್ವ ಜನ ಸಮುದಾಯಕ್ಕೆ ಆದರ್ಶ ಮಾರ್ಗದರ್ಶನ ಮತ್ತು ವೀರಶೈವ ಧರ್ಮ, ಸಂಸ್ಕೃತಿ, ಗುರು ಪರಂಪರೆಯ ಆದರ್ಶ ಮೌಲ್ಯಗಳನ್ನು ಬೆಳೆಸುವರೆಂಬ ಆತ್ಮ ವಿಶ್ವಾಸ ತಮಗಿದೆ ಎಂದ ಜಗದ್ಗುರುಗಳು, ನೂತನ ಶ್ರೀಗಳಿಗೆ ಪಂಚಮುದ್ರಾ ಸಮೇತ ಶ್ರೀ ಪೀಠದಿಂದ ರೇಶ್ಮೇ ಮಡಿ ಸ್ಮರಣಿಕೆ ಫಲ ಪುಷ್ಪಗಳನ್ನಿತ್ತು ಶುಭ ಹಾರೈಸಿದರು.

ನಿಡಗುಂದಿ ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ನೂತನ ಶ್ರೀಗಳವರಿಗೆ ಷಟ್ಸ್ಥಲ ಬ್ರಹ್ಮೋಪದೇಶ ಪಂಚಮುದ್ರ ಪ್ರದಾನ ಮಾಡಿದರು. ಅಂಕಲಿ ನಿರುಪಾದೇಶ್ವರ ಮಠದ ವೀರಭದ್ರಸ್ವಾಮಿಗಳು ಅಧ್ಯಕ್ಷತೆ ವಹಿಸಿದ್ದರು. ಹಂಪಿ ಸಾವಿರದೇವರಮಠದ ವಾಮದೇವ ಮಹಾಂತ ಶಿವಾಚಾರ್ಯರು, ಮಳಲಿ ಡಾ.ನಾಗಭೂಷಣ ಶಿವಾಚಾರ್ಯರು, ಗುಂಡಕನಾಳ ಗುರುಲಿಂಗ ಶಿವಾಚಾರ್ಯರು, ಬದಾಮಿಯ ಶಿವಪೂಜಿ ಶಿವಾಚಾರ್ಯರು, ಚಿಮ್ಮಲಗಿಯ ಸಿದ್ಧರೇಣುಕ ಶಿವಾಚಾರ್ಯರು, ದೇವರಹಿಪ್ಪರಗಿಯ ಜಡೆ ಸಿದ್ಧೇಶ್ವರ ಶಿವಾಚಾರ್ಯರು, ಆಲಮಟ್ಟಿಯ ರುದ್ರಮುನಿ ದೇವರು ಉಪಸ್ಥಿತರಿದ್ದರು.

ಜವಳಿ ಮತ್ತು ಸಕ್ಕರೆ ಖಾತೆ ಸಚಿವ ಶಿವಾನಂದ ಪಾಟೀಲ ಸಮಾರಂಭದಲ್ಲಿ ಭಾಗವಹಿಸಿ ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಪಡೆದರು. ಅತಿಥಿಗಳಾಗಿ ರುದ್ರಯ್ಯ ಮಠ, ಹಣಮಂತರಾಯ ಬಿರಾದಾರ, ಸುರೇಶ ಸಜ್ಜನ, ಭೀಮನಗೌಡ ಬಿರಾದಾರ, ಸಂಗಣ್ಣ ಕುಂಬಾರ ಪಾಲ್ಗೊಂಡಿದ್ದರು.

ಇದೇ ಸಂದರ್ಭದಲ್ಲಿ ಧರ್ಮ ಸಂದೇಶ ನೀಡಿದ ನೂತನ ಚನ್ನವೀರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಬದುಕಿ ಬಾಳುವ ಮನುಷ್ಯನಿಗೆ ಧರ್ಮ ದಿಕ್ಸೂಚಿ. ವೀರಶೈವ ಧರ್ಮದ ಆದರ್ಶ ಚಿಂತನಗಳನ್ನು ಮೈಗೂಡಿಸಿಕೊಂಡು ಧರ್ಮ ಸಂಸ್ಕೃತಿ ಪರಂಪರೆ ಮತ್ತು ಸಾಮಾಜಿಕ ಸತ್ಕಾರ್ಯಗಳನ್ನು ನೆರವೇರಿಸಿಕೊಂಡು ಬರುವ ಸತ್ಯ ಸಂಕಲ್ಪ ನಮ್ಮದಾಗಿದೆ. ಈ ದಿಶೆಯಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳ ಮಾರ್ಗದರ್ಶನ ಸದಾ ಇರಲೆಂದು ಪ್ರಾರ್ಥಿಸಿದರು.

### ಗಾನಯೋಗಿ ಪಂಚಾಕ್ಷರಿ ಸಂಗೀತ ಪರಂಪರಾ ಉತ್ಸವ, ಪಂಚಾಕ್ಷರಿ ಗದಗ ಘರಾನಾ ಸಮ್ಮೇಳನ ಇಂದು

# 'ಗುರುಕುಮಾರ ಪಂಚಾಕ್ಷರಿ ಸನ್ಮಾನ' ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಹೂವಿನಹಡಗಲಿ

ಜಂಗಮ ಕ್ಷೇತ್ರ ಶ್ರೀ ಚನ್ನವೀರ ಮಹಾಶಿವಯೋಗಿಗಳವರ ಮಠ ಲಿಂಗನಾಯಕನಹಳ್ಳಿ ಇವರ ಕೃಪಾಶ್ರಯದಲ್ಲಿ 300ನೇ ಶಿವಾನುಭವ, ಗಾನಯೋಗಿ ಪಂಚಾಕ್ಷರಿ ಸಂಗೀತ ಪರಂಪರಾ ಉತ್ಸವ, ಪಂಚಾಕ್ಷರಿ ಗದಗ ಘರಾನಾ ಸಮ್ಮೇಳನ ಹಾಗೂ ಗುರುಕುಮಾರ ಪಂಚಾಕ್ಷರಿ ಸನ್ಮಾನ–2024 ಕಾರ್ಯಕ್ರಮ ಮಾ. 10ರಂದು ಬೆಳಿಗ್ಗೆ 10 ಗಂಟೆಗೆ ಲಿಂಗನಾಯಕನಹಳ್ಳಿಯ ಜಂಗಮಕ್ಷೇತ್ರ ಶ್ರೀ ಚನ್ನವೀರೇಶ್ವರ ಮಠದಲ್ಲಿ ಜರುಗಲಿದೆ.

ಮಾ. 10ರಂದು ಬೆಳಿಗ್ಗೆ 9.30 ಶ್ರೀಗುರು ಕುಮಾರೇಶ್ವರ ವೇದಿಕೆಯಲ್ಲಿ ರಾಷ್ಟ್ರೀಯ ಘರಾನಾ ಸಮ್ಮೇಳನ ಉದ್ಘಾಟನಾ ಸಮಾರಂಭ ಜರುಗಲಿದೆ. ಪೂಜ್ಯಶ್ರೀ ಚೆನ್ನವೀರ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸುವರು. ಹೊಳಲಿನ ಪೂಜ್ಯಶ್ರೀ ಚನ್ನಬಸವ ದೇವರು, ಲಿಂಗನಾಯಕನಹಳ್ಳಿಯ ಪೂಜ್ಯಶ್ರೀ ನಿರಂಜನ ದೇವರು ನೇತೃತ್ವ ವಹಿಸುವರು. ಗದುಗಿನ ಶ್ರೀಗುರು ಪಂಚಾಕ್ಷರಿ ಸೇವಾ ಸಮಿತಿಯ ಅಧ್ಯಕ್ಷರು ಹಾಗೂ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಪಂ. ಡಾ. ರಾಜಗುರು ಗುರುಸ್ವಾಮಿ ಕಲಿಕೇರಿ ಅಧ್ಯಕ್ಷತೆ ವಹಿಸುವರು. ಗದುಗಿನ ಅಡವೀಂದ್ರಸ್ವಾಮಿ ಮಠದ ಧರ್ಮದರ್ಶಿ ವೇ. ಮಹೇಶ್ವರ ಸ್ವಾಮೀಜಿ ಹೊಸಹಳ್ಳಿಮಠ ಸಮ್ಮುಖ ವಹಿಸುವರು.



ಉಭಯ ಗಾಯನಚಾರ್ಯ
ಲಿಂ. ಪಂಡಿತ್ ಪಂಚಾಕ್ಷರ ಗವಾಯಿಗಳವರು, ಗದಗ.

ವಿ.ಪ ಉಪ ಸಭಾಪತಿ ರುದ್ರಪ್ಪ ಲಮಾಣಿ ವೇದಿಕೆಯನ್ನು ಉದ್ಘಾಟಿಸುವರು. ಹರಪನಹಳ್ಳಿ ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ ಕಾರ್ಯಕ್ರಮ ಉದ್ಘಾಟಿಸುವವರು. ಲಿಂಗನಾಯಕನಹಳ್ಳಿಯ ಚಿಕ್ಕಪ್ಪ ಬಣಕಾರ ಅವರಿಂದ ಶಿವಾನುಭವ ಸಂಪದವಾಗುವುದು.

ಮುಖ್ಯ ಅತಿಥಿಗಳಾಗಿ ಹೂವಿನಹಡಗಲಿಯ ಬಿಜೆಪಿ ಮುಖಂಡ ಓದು ಗಂಗಪ್ಪನವರು ಆಗಮಿಸುವರು.

ಮಧ್ಯಾಹ್ನ 2 ಗಂಟೆಗೆ ಗುರುಕುಮಾರ ಪಂಚಾಕ್ಷರಿ ಸಮ್ಮಾನ ಸಮಾರಂಭ ಜರುಗುವುದು. ಸಾನಿಧ್ಯವನ್ನು ಲಿಂಗನಾಯಕನಹಳ್ಳಿ ಜಂಗಮಕ್ಷೇತ್ರದ ಪೂಜ್ಯಶ್ರೀ ಚೆನ್ನವೀರ ಮಹಾಸ್ವಾಮಿಗಳು ವಹಿಸುವರು. ಪಂ. ಡಾ. ರಾಜಗುರು ಗುರುಸ್ವಾಮಿ ಕಲಿಕೇರಿ ಅಧ್ಯಕ್ಷತೆ ವಹಿಸುವರು. ಗದುಗಿನ ಅಡವೇಂದ್ರಸ್ವಾಮಿ ಮಠದ ಧರ್ಮದರ್ಶಿ ವೇ. ಮಹೇಶ್ವರ ಸ್ವಾಮೀಜಿ ಹೊಸಹಳ್ಳಿಮಠ ಸಮ್ಮುಖ ವಹಿಸುವರು. ಬಳ್ಳಾರಿಯ ಮಾಜಿ ಸಚಿವ ಬಿ.ಶ್ರೀರಾಮುಲು ಕಾರ್ಯಕ್ರಮ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಹೂವಿನಹಡಗಲಿಯ ಶಾಸಕ ಕೃಷ್ಣಾ ನಾಯಕ, ಹಿರೆಕುರುವತ್ತಿ ಗ್ರಾ.ಪಂ ಅಧ್ಯಕ್ಷ ಭರಮಪ್ಪ ಕುಂಚೂರು ಆಗಮಿಸುವರು.

ಇದೇ ಸಂದರ್ಭದಲ್ಲಿ ಗುರುಕುಮಾರ ಪಂಚಾಕ್ಷರಿ ಸಮ್ಮಾನ–2024 ಪುರಸ್ಕೃತ ಧಾರವಾಡದ ಖ್ಯಾತ ಗಾಯಕ ಪಂ. ಸೋಮನಾಥ ಮರಡೂರ ಅವರಿಂದ ಸಂಗೀತ ಕಾರ್ಯಕ್ರಮ ಜರಗುವುದು ಎಂದು ಗದುಗಿನ ಶ್ರೀ ಗುರು ಪಂಚಾಕ್ಷರಿ ಸೇವಾ ಸಮಿತಿಯ ಕಾರ್ಯದರ್ಶಿ ಮಲ್ಲಯ್ಯ ಶಿರೋಳಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಈ ವರ್ಷ 10 ಸಾವಿರ ಶಿಕ್ಷಕರ ನೇಮಕಾತಿಗೆ ಚಿಂತನೆ



■ವಿಜಯಸಾಕ್ಷಿ ಸುದ್ದಿ, ಕಲಬುರಗಿ

ರಾಜ್ಯದ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಹಿನ್ನೆಲೆ, ಈ ವರ್ಷ ಇನ್ನೂ 10 ಸಾವಿರ ಶಿಕ್ಷಕರ ನೇಮಕಾತಿ ಕುರಿತು ಚಿಂತನೆ ನಡೆಸಲಾಗಿದೆ ಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು ಶುಕ್ರವಾರ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬಂದ ನಂತರ ಶಿಕ್ಷಕರ ನೇಮಕಾತಿ ಪ್ರಕ್ರಿಯೆ ಚುರುಕುಗೊಳಿಸಿ 14 ಸಾವಿರ ಶಿಕ್ಷಕರ ನೇಮಕಾತಿ ಮಾಡಿಕೊಳ್ಳಲಾಗಿದೆ,

ಇದರಲ್ಲಿ 12 ಸಾವಿರ ಜನರು ಈಗಾಗಲೆ ಶಾಲೆಗೆ ಹಾಜರಾಗಿದ್ದಾರೆ. 800ರಿಂದ 900 ಜನ ವಿವಿಧ ಕಾರಣದಿಂದ ಕೋರ್ಟ್ ಮೊರೆ ಹೋಗಿದ್ದು, ಆ ಸಮಸ್ಯೆ ಸಹ ಶೀಘ್ರ ಬಗೆಹರಿಯಲಿದೆ. 12 ಸಾವಿರ ಪೈಕಿ 3,900 ಶಿಕ್ಷಕರನ್ನು ಕಲ್ಯಾಣ ಕರ್ನಾಟಕ ಭಾಗಕ್ಕೆ ನಿಯೋಜಿಸಲಾಗಿದೆ. 43 ಸಾವಿರ ಅತಿಥಿ ಶಿಕ್ಷಕರನ್ನು ನೇಮಿಸಲಾಗಿದೆ ಎಂದು ಹೇಳಿದರು.

# ಸಹಕಾರಿ ಆಂದೋಲನ ಸ್ವಾವಲಂಬಿ ಬದುಕಿಗೆ ಆಸರೆ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದಲ್ಲಿ ಪತ್ತಿನ ಸಹಕಾರ ಸಂಘಗಳು ರಾಜ್ಯದ ಆರ್ಥಿಕ ಬೆಳವಣಿಗೆಗೆ ತಮ್ಮದೇ ಆದ ಕೊಡುಗೆಯನ್ನು ನೀಡುತ್ತಿವೆ. ಸಹಕಾರ ವಲಯವು ವಿಶೇಷವಾಗಿ ಗ್ರಾಮೀಣ ಪ್ರದೇಶದಲ್ಲಿ ಅದರಲ್ಲಿಯೂ ರೈತರು ಹಾಗೂ ಹೈನುಗಾರರ ಬದುಕಿನ ಆಸರೆಯಂತೆ ಕಾರ್ಯನಿರ್ವಹಿಸುತ್ತಿದೆ. ದೇಶದ ಆರ್ಥಿಕ ವ್ಯವಸ್ಥೆಗೆ ತನ್ನದೇ ಆದ ಕೊಡುಗೆ ನೀಡುತ್ತಿರುವ ಸಹಕಾರಿ ಆಂದೋಲನ ಕೋಟ್ಯಂತರ ಜನರ ಸ್ವಾವಲಂಬಿ ಬದುಕಿಗೆ ಆಸರೆಯಾಗಿದೆ ಎಂದು ಸಹಕಾರ ಯೂನಿಯನ್ ನಿರ್ದೇಶಕ ಎಸ್.ಕೆ. ಕುರಡಗಿ ಹೇಳಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ. ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ಹಾಗೂ ಸಹಕಾರ ಇಲಾಖೆ, ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಗದಗ ಜಿಲ್ಲೆಯ ಪತ್ತಿನ ಹಾಗೂ ನೌಕರರ ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರು ಹಾಗೂ ಮುಖ್ಯ ಕಾರ್ಯನಿರ್ವಾಹಕರುಗಳಿಗೆ ಹಮ್ಮಿಕೊಂಡಿದ್ದ ಒಂದು ದಿನದ ವಿಶೇಷ ಸಹಕಾರ ತರಬೇತಿ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ಅಧ್ಯಕ್ಷ ಸಿ.ಎಂ. ಪಾಟೀಲ ಅಧ್ಯಕ್ಷತೆ ವಹಿಸಿ ಮಾತನಾಡಿ, ಯುವಜನರು ಸಹಕಾರ ಕ್ಷೇತ್ರದ ಬಗ್ಗೆ ಅಗತ್ಯ ಮಾಹಿತಿ ಪಡೆದು, ತೊಡಗಿಸಿಕೊಳ್ಳಲು ಸಾಕಷ್ಟು ಅವಕಾಶಗಳಿವೆ. ಯುವಜನರು ಬದ್ಧತೆ, ದಕ್ಷತೆ ಮತ್ತು ಪ್ರಾಮಾಣಿಕತೆಯಿಂದ ತೊಡಗಿಸಿಕೊಂಡು ಸ್ವಾವಲಂಬಿಗಳಾಗುವುದರ ಮೂಲಕ ಕ್ಷೇತ್ರವನ್ನು ಉತ್ತುಂಗಕ್ಕೆ ಏರಿಸಬೇಕೆಂದು ಸಲಹೆ ನೀಡಿದರು.

ಗದಗ ಸಹಕಾರ ಅಭಿವೃದ್ಧಿ ಅಧಿಕಾರಿ ಎಚ್.ಎಂ. ಶಾಂತಾ, ಎನಿವೃತ್ತ ಸಹಾಯಕ ನಿಬಂಧಕ ಎಸ್.ಜಿ. ಜೋಶಿ ಬಿ.ಎಂ. ಬಿಳೆಯಲಿ, ವ್ಹಿ.ಜಿ. ಕುಲಕರ್ಣಿ ಮಾತನಾಡಿದರು. ಸಂಘದ ಮುಖ್ಯ ಕಾರ್ಯನಿರ್ವಾಹಕ ಬಿ.ಎಸ್. ಹಿರೇಮಠ ಪ್ರಾರ್ಥಿಸಿದರು. ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಚಂದ್ರಶೇಖರ ಎಸ್.ಕರಿಯಪ್ಪನವರ ಸ್ವಾಗತಿಸಿ, ನಿರೂಪಿಸಿದರು. ಸಹಕಾರ ಶಿಕ್ಷಕಿ ರಶೀದಾಬಾನು ಸಿ. ಯಲಿಗಾರ ವಂದಿಸಿದರು.

## ಉಭಯ ಶ್ರೀಗಳ ಪ್ರತಿಷ್ಠೆಗೆ 'ಚಲಿಸದ ತೇರು'

▶▶ ಮೊದಲನೇ ಪುಟದಿಂದ

ಜಾತ್ರಾ ಮಹೋತ್ಸವದ ಎರಡು ದಿನ ಮುನ್ನ ಉಭಯ ಶ್ರೀಗಳ ಪರ ಭಕ್ತರು ಸಭೆ ನಡೆಸಿ, ಒಮ್ಮತದ ನಿರ್ಧಾರಕ್ಕೆ ಬರುವ ಪ್ರಯತ್ನ ನಡೆಸಿದರು. ಆಗ ಹಿರಿಯ ಶ್ರೀಗಳು, ಕಿರಿಯ ಶ್ರೀಗಳ ಜೊತೆಗೂಡಿ ಧಾರ್ಮಿಕ ಕಾರ್ಯಕ್ರಮದಲ್ಲಿ ಭಾಗಿಯಾಗುತ್ತೇವೆ, ಬಂಗಾರ ಕಿರೀಟ, ಅಡ್ಡಪಲ್ಲಕ್ಕಿಯಲ್ಲಿ ತಾವೇ ಕೂಡುವುದಾಗಿ ಪಟ್ಟು ಹಿಡಿದರು. ಇದಕ್ಕೆ ಕಿರಿಯ ಶ್ರೀಗಳು ಒಪ್ಪಿಗೆ ಸೂಚಿಸಿದ್ದರು. ಆದರೆ ಶುಕ್ರವಾರ ಸಂಜೆ ಏಕಾಏಕಿ ನಿರ್ಧಾರ ಬದಲಿಸಿದ ಹಿರಿಯ ಶ್ರೀಗಳು, ಎಲ್ಲ ಧಾರ್ಮಿಕ ಕಾರ್ಯಕ್ರಮಗಳು ಕೇವಲ ತಮ್ಮ ಸಾನ್ನಿಧ್ಯದಲ್ಲಿ ಮಾತ್ರ ನಡೆಯಬೇಕು ಎಂದರು.

ಇದಕ್ಕೆ ಕಿರಿಯ ಶ್ರೀಗಳು ಆಕ್ಷೇಪ ವ್ಯಕ್ತಪಡಿಸಿಸುತ್ತಿದ್ದಂತೆ ಉಭಯ ಶ್ರೀಗಳ ಪರ ಭಕ್ತರಲ್ಲಿ ಮತ್ತೆ ವಾಗ್ವಾದ ಮುಗಿಲು ಮುಟ್ಟಿತು. ಅಂತಿಮವಾಗಿ ತಹಸೀಲ್ದಾರ್ ಶ್ರೀನಿವಾಸಮೂರ್ತಿ ಕುಲಕರ್ಣಿ ಅವರು ಶ್ರೀಮಠದ ಎಲ್ಲ ಧಾರ್ಮಿಕ ಕಾರ್ಯಕ್ರಮಗಳಿಗೆ ತಡೆ ನೀಡಿ ಆದೇಶ ಹೊರಡಿಸಿದರು.

ಜಾತ್ರಾ ಮಹೋತ್ಸವಕ್ಕೆ ತಹಸೀಲ್ದಾರರು ತಡೆ ನೀಡಿದರೂ ಭಕ್ತರು ಕರ್ತೃ ಗದ್ದುಗೆ ದರ್ಶನ ಪಡೆಯಬಹುದಾಗಿದ್ದು, ಯಾವುದೇ ಧಾರ್ಮಿಕ ಕಾರ್ಯಗಳನ್ನು ಕೈಗೊಳ್ಳುವಂತಿಲ್ಲ. ಶ್ರೀಮಠದ ಆವರಣದಲ್ಲಿ ಭಾರೀ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿದೆ.

### ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಶಿವರಾತ್ರಿಯ ನಿಮಿತ್ತ ಧಾರ್ಮಿಕ ಸಮಾರಂಭ

## ಧ್ಯಾನದಿಂದ ಪ್ರಸನ್ನನಾಗುವ ದೇವರು ಶಿವ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಉಳಿದೆಲ್ಲ ದೇವರು ಅಲಂಕಾರ, ಪೂಜೆ ಮತ್ತಿತರ ಸಂಗತಿಗಳನ್ನು ಬಯಸಿದರೆ ಶಿವನು ಮಾತ್ರ ಧ್ಯಾನದಿಂದ ಪ್ರಸನನ್ನನಾಗುವ ದೇವರಾಗಿದ್ದಾನೆ. ಒಂದು ದಳ ಬಿಲ್ವಪತ್ರೆಯನ್ನು ಓಂ ನಮಃ ಶಿವಾಯ ಮಂತ್ರದೊಂದಿಗೆ ಭಕ್ತಿಯಿಂದ ಏರಿಸಿದರೆ ಸಾಕು, ಅವನು ಎಲ್ಲ ಇಷ್ಟಾರ್ಥಗಳನ್ನು ನೆರವೇರಿಸುತ್ತಾನೆ ಎಂದು ಸಾಹಿತಿ, ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಹೇಳಿದರು.

ಪಟ್ಟಣದ ಈಶ್ವರೀಯ ವಿಶ್ವ ವಿದ್ಯಾಲಯದಲ್ಲಿ ಶಿವರಾತ್ರಿಯ ನಿಮಿತ್ತ ಏರ್ಪಡಿಸಿದ್ದ ಧಾರ್ಮಿಕ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಎಷ್ಟೋ ಜನ ದೇವರೆಲ್ಲಿದ್ದಾನೆ ಎಂದು ಪ್ರಶ್ನಿಸುತ್ತಾರೆ. ದೇವರು ಈ ಜಗತ್ತಿನ ಚರಾಚರ ವಸ್ತುಗಳಲ್ಲಿ ಇದ್ದಾನೆ. ಅವನನ್ನು ನೋಡುವ ದೃಷ್ಟಿ ಬೇಕಷ್ಟೆ. ಈ ಜಗತ್ತಿಗೆ ಕಾಲಕಾಲಕ್ಕೆ ಮಳೆ ಸುರಿಸುವ, ಎಲ್ಲರಿಗೂ ಉಸಿರಾಡಲು ಗಾಳಿ ನೀಡುವ ಸೃಷ್ಟಿಯೇ ನಮ್ಮ ಕಣ್ಣಿಗೆ ಕಾಣುವ ದೇವರು. ಆದ್ದರಿಂದ ಸೃಷ್ಟಿಯ ಪೂಜೆಯನ್ನೇ ನಾವು ದೇವ ಪೂಜೆ ಎಂದು ಕರೆಯುತ್ತಿದ್ದು, ನಮಗೆ ಬೇಕಾದ ರೂಪ, ಆಕಾರವನ್ನು ನೀಡಿ ಪೂಜಿಸುತ್ತಿದ್ದೇವೆ ಎಂದು ಹೇಳಿದರು.




ಲಿಂಗ ರೂಪದಲ್ಲಿ ಶಿವನನ್ನು ಮಾತ್ರ ಪೂಜಿಸುತ್ತಿದ್ದು, ಉಳಿದೆಲ್ಲ ದೇವಾನುದೇವತೆಗಳಿಗೆ ರೂಪವನ್ನು ನೀಡಿದ್ದೇವೆ. ಈ ಭಾವಚಿತ್ರಗಳು ನಮ್ಮ ಭಾವನೆಯಿಂದ ಬಂದ ಮೂರ್ತ ರೂಪಗಳೇ ಹೊರತು ದೇವರು ಹೀಗೇ ಇದ್ದಾನೆ, ಇರಬೇಕು ಎನ್ನುವ ಕಲ್ಪನೆ ಯಾರಿಗೂ ಇಲ್ಲ. ಎಲ್ಲ ಹಬ್ಬಗಳಿಗಿಂದ ಮಹಾಶಿವರಾತ್ರಿ ಅತ್ಯಂತ ಪೂಜ್ಯನೀಯ ಹಬ್ಬವಾಗಿದ್ದು, ಈ ಹಬ್ಬವನ್ನು ಇಡೀ ದೇಶಾದ್ಯಂತ ಶ್ರದ್ಧಾ-ಭಕ್ತಿಗಳಿಂದ ಆಚರಿಸಲಾಗುತ್ತಿದೆ. ಎಲ್ಲ ಜ್ಯೋತಿರ್ಲಿಂಗಗಳ ದರುಶನಕ್ಕೆ ವ್ಯವಸ್ಥೆ ಮಾಡಿರುವ ಸಂಚಾಲಕಿ ಬ್ರ.ಕು. ಸವಿತಕ್ಕ ಮತ್ತು ಎಲ್ಲ ಕಾರ್ಯಕರ್ತರನ್ನು ಅಭಿನಂದಿಸುವದಾಗಿ ತಿಳಿಸಿದರು.

ಸಂಚಾಲಕಿ ಸವಿತಕ್ಕ ಮಾತನಾಡಿ, ಶಿವ ಮತ್ತು ಶಂಕರರು ಹೇಗೆ ಬೇರೆ ಬೇರೆ ಎಂಬುದನ್ನು ವಿವರಿಸಿದರು. ಶಿವರಾತ್ರಿ ಹಬ್ಬವು ಏಕಿಷ್ಟು ಮಹತ್ವವನ್ನು ಪಡೆದುಕೊಂಡಿದೆ, ಅದರ ಹಿನ್ನೆಲೆ ಮತ್ತು ಮುನ್ನೆಲೆಗಳನ್ನು ತಿಳಿಸಿ, ಭಾರತ ದೇಶದಲ್ಲಿ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯವು ನಡೆದು ಬಂದ ದಾರಿಯ ಬಗ್ಗೆ ವಿವರಿಸಿದರು.

ಮುಖ್ಯ ಶಿಕ್ಷಕ ಬಿ.ಬಿ. ಕುರಿ ಮತ್ತು ಶಿಕ್ಷಕ ವಿ.ಎ. ಕುಂಬಾರ ಶಿವರಾತ್ರಿಯ ಮಹತ್ವ ಮತ್ತು ಪಟ್ಟಣದ ಜನತೆಗೆ ಈಶ್ವರೀಯ ವಿಶ್ವವಿದ್ಯಾಲಯವು ನೀಡುತ್ತಿರುವ ಆಧ್ಯಾತ್ಮಿಕ ಸೇವೆಯ ಬಗ್ಗೆ ಮಾತನಾಡಿದರು. ವಿಶ್ವವಿದ್ಯಾಲಯದ ಆವರಣದಲ್ಲಿ ನಿರ್ಮಿಸಲಾದ ಜ್ಯೋತಿರ್ಲಿಂಗಗಳ ಉದ್ಘಾಟನೆಯನ್ನು ದಂಪತಿಗಳಿಂದ ಮಾಡಿಸಿದ್ದು ವಿಶೇಷವಾಗಿತ್ತು.

ಮಹಾಶಿವರಾತ್ರಿ ನಿಮಿತ್ತ ಏರ್ಪಡಿಸಿದ್ದ ಅನೇಕ ಸ್ಪರ್ಧೆಗಳಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನಗಳನ್ನು ನೀಡಿ ಪುರಸ್ಕರಿಸಲಾಯಿತು.

## ಸರಕಾರಿ ಶಾಲೆಗಳು ಸಬಲೀಕರಣಗೊಳ್ಳಲಿ




■ ವಿಜಯಸಾಕ್ಷಿ ಸುದ್ದಿ, ಗದಗ

ಸರಕಾರಿ ಶಾಲೆಗಳು ಮಕ್ಕಳ ಸರ್ವಾಂಗೀಣ ಪ್ರಗತಿಯಲ್ಲಿ ಮುಂಚೂಣಿಯಲ್ಲಿದ್ದು, ಇಲ್ಲಿ ವಿದ್ಯಾಭ್ಯಾಸ ಮಾಡಿದ ಮಕ್ಕಳು ಬದುಕನ್ನು ಅರ್ಥ ಮಾಡಿಕೊಂಡು ಭವಿಷ್ಯದಲ್ಲಿ ಒಳ್ಳೆಯ ಉದ್ಯೋಗಸ್ಥರಾಗುತ್ತಾರೆ. ಅದಕ್ಕಾಗಿ ಸರಕಾರಿ ಶಾಲೆಗಳ ಸಬಲೀಕರಣ ಮುಖ್ಯವಾಗಿದೆ ಎಂದು ಗದಗ-ಬೆಟಗೇರಿ ರೋಟರಿ ವೇಲ್ಫೇರ್ ಸೊಸೈಟಿ ಅಧ್ಯಕ್ಷ ಶ್ರೀಧರ ಸುಲ್ತಾನಪೂರ ಹೇಳಿದರು.

ಅವರು ಗದುಗಿನ ಸರಕಾರಿ ಶಾಲೆ ನಂ. 19ರಲ್ಲಿ ಜರುಗಿದ ದಾನಿಗಳಿಗೆ ಸನ್ಮಾನ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದರು.

ಈ ಶಾಲೆಗೆ ಗದಗ-ಬೆಟಗೇರಿ ರೋಟರಿ ಕ್ಲಬ್ ಕಂಪ್ಯೂಟರ್‌ನ್ನು ಕೊಡುಗೆಯಾಗಿ ನೀಡಿದ್ದು, ಬರಲಿರುವ ದಿನಮಾನಗಳಲ್ಲಿ ಸರಕಾರಿ ಶಾಲೆಗಳ ಸಬಲೀಕರಣಕ್ಕೆ ಸಾಧ್ಯವಾದಷ್ಟು ಕೈ ಜೋಡಿಸಲಾಗುವದು ಎಂದರು.

ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಮಾತನಾಡಿ, ಸಂಘ-ಸಂಸ್ಥೆಗಳು ಶಾಲೆಗಳ ಅಗತ್ಯಕ್ಕೆ ಅನುಗುಣವಾಗಿ ಸಹಕಾರ ಸಲ್ಲಿಸುವ ಮೂಲಕ ಸರಕಾರಿ ಶಾಲೆಗಳೊಂದಿಗೆ ಕೈಜೋಡಿಸಬೇಕೆಂದರು.

ಶಾಲೆಯ ವತಿಯಿಂದ ಗದಗ-ಬೆಟಗೇರಿ ರೋಟರಿ ಕ್ಲಬ್ ಅಧ್ಯಕ್ಷ ಚಂದ್ರಮೌಳಿ ಜಾಲಿ, ಶ್ರೀಧರ ಸುಲ್ತಾನಪೂರ, ಶಿವಾಚಾರ್ಯ ಹೊಸಳ್ಳಿಮಠ, ಕವಿತಾ ಬೇಲೇರಿ ಅವರನ್ನು ಸನ್ಮಾನಿಸಲಾಯಿತು.

ಅಧ್ಯಕ್ಷತೆಯನ್ನು ಶಾಲಾ ಮುಖ್ಯೋಪಾಧ್ಯಾಯ ಕೆ.ಎನ್. ದೇಸಾಯಿ ವಹಿಸಿದ್ದರು. ಎಂ.ಎಸ್. ಬನ್ನಿಮಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಸ್.ಎಸ್. ಸೂಳಿಕೇರಿ ನಿರೂಪಿಸಿದರು, ಎಸ್.ವ್ಹಿ. ಕುಲಕರ್ಣಿ ಪರಿಚಯಿಸಿದರು. ಎನ್.ಎಸ್.ಮಂಗಳಾ ವಂದಿಸಿದರು.

## ಕನ್ನಡ ನಾಮಫಲಕ ಕಡ್ಡಾಯಗೊಳಿಸಲು ಆಗ್ರಹ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಕನ್ನಡ ನಾಮಫಲಕಗಳನ್ನು ಕಡ್ಡಾಯವಾಗಿ ಅಳವಡಿಸುವಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಪುರಸಭೆ ಮುಖ್ಯಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ವೇಳೆ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಬಸವರಾಜ ಹೊಗೆಸೊಪ್ಪಿನ ಮತ್ತು ತಾಲೂಕಾಧ್ಯಕ್ಷ ಲೋಕೇಶ ಸುತಾರ ಮಾತನಾಡಿ, ಕರವೇ ಹೋರಾಟದ ಫಲವಾಗಿ ರಾಜ್ಯ ಸರಕಾರ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ತಿದ್ದುಪಡಿ ವಿಧೇಯಕವನ್ನು ಜಾರಿಗೊಳಿಸಿದೆ. ಇದರನ್ವಯ ಎಲ್ಲ ಅಂಗಡಿ ಮುಂಗಟ್ಟುಗಳ ಮೇಲೂ ಕನ್ನಡದ ನಾಮಫಲಕ ಶೇ.60ರಷ್ಟು ಭಾಗ ಇರಬೇಕು. ಈ ಬಗ್ಗೆ ತಾಲೂಕಾಡಳಿತ ಕಟ್ಟನಿಟ್ಟಿನ ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ನಮ್ಮ ವೇದಿಕೆಯವರು ಖುದ್ದಾಗಿ ಬೀದಿಗಿಳಿದು, ಅನ್ಯಭಾಷಾ ನಾಮಫಲಕಗಳನ್ನು ತೆರವುಗೊಳಿಸಲು ಮುಂದಾಗುತ್ತೇವೆ ಎಂದು ಎಚ್ಚರಿಸಿದರು.




ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಮನವಿ ಸ್ವೀಕರಿಸಿ, 7 ದಿನಗಳೊಳಗೆ ಎಲ್ಲ ವ್ಯಾಪಾರಸ್ಥರು ಕನ್ನಡ ನಾಮಫಲಕ ಕಡ್ಡಾಯವಾಗಿ ಹಾಕಬೇಕು ಈ ನಿಟ್ಟಿನಲ್ಲಿ ಸಾರ್ವಜನಿಕ ಪ್ರಕಟಣೆ ನೀಡಿ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

ಈ ವೇಳೆ ತಾಲೂಕಾ ಪದಾಧಿಕಾರಿಗಳಾದ ಪ್ರಕಾಶ ಕೊಂಚಿಗೇರಿಮಠ, ಪ್ರವೀಣ ಗೌರಿ, ಚನ್ನಬಸಯ್ಯ ಗಡ್ಡದೇವರಮಠ, ಬಸವರಾಜ ರಗಟಿ, ಗಣೇಶ ಮೆಹರವಾಡೆ, ಪ್ರಕಾಶ ಹುಡೇದ, ಪ್ರವೀಣ ಕುರಿ, ಕೈಸರ್ ಮಹ್ಮದಅಲಿ, ಗಂಗಾಧರ ಕೊಂಚಿಗೇರಿಮಠ, ಬಸನಗೌಡ ಪಾಟೀಲ, ಮುತ್ತು ಕರ್ಜೆಕಣ್ಣವರ, ಗಂಗಾಧರ, ಕುಮಾರ ಕಣಗಿ, ಆದೇಶ ಸವಣೂರ, ಷಣ್ಮುಖಪ್ಪ, ಮಲ್ಲೇಶಪ್ಪ ಜಬಡಿ, ಚಂದ್ರು ನೀರಲಗಿ, ಗುಡ್ಡೆನಪ್ಪ ಸೊಪ್ಪಿನ, ಬಸವರಾಜ ಮಲ್ಲೂರ ಮುಂತಾದವರಿದ್ದರು.

## ಆನ್‌ಲೈನ್ ಉಪನ್ಯಾಸ ಇಂದು

■ ವಿಜಯಸಾಕ್ಷಿ ಸುದ್ದಿ, ಧಾರವಾಡ



ಇಲ್ಲಿಯ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ 'ಜೀವನ ಶಿಕ್ಷಣ' ಮಾಸಪತ್ರಿಕೆಯ ಸಹ ಸಂಪಾದಕ ರಾಜು ಭೂಶೆಟ್ಟಿ ಅವರು ದೈನಂದಿನ ಜೀವನದಲ್ಲಿ ವಿಜ್ಞಾನ ಎಂಬ ವಿಷಯದ ಕುರಿತು ಆನ್‌ಲೈನ್ ಉಪನ್ಯಾಸವನ್ನು ಮಾ.10ರಂದು ರಾತ್ರಿ 7 ಗಂಟೆಗೆ ನೀಡಲಿದ್ದು, ಆಸಕ್ತರು ಗೂಗಲ್ ಲಿಂಕ್ https://meet.google.com/abu-vxji-ivq ಬಳಸಿಕೊಂಡು ಭಾಗವಹಿಸಬಹುದಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್‌ನ ಸಂಸ್ಥಾಪಕ ಅಧ್ಯಕ್ಷ ಡಾ.ಹುಲಿಕಲ್ ನಟರಾಜ್ ವಹಿಸಿಕೊಳ್ಳುವರು. ಉದ್ಘಾಟನೆಯನ್ನು ಬಾಗಲಕೋಟೆ ಜಿಲ್ಲೆಯ ಹಿರಿಯ ಪತ್ರಕರ್ತ ಶಿವಲಿಂಗ ಸಿದ್ನಾಳ ನೆರವೇರಿಸುವರು. ವೈ.ಎನ್. ಶಂಕರೇಗೌಡ, ಲಯನ್ ಬಿ.ನಿರಂಜನ್, ಡಾ.ಮಂಜುನಾಥ ಬಾರಕೇರ, ದಾಕ್ಷಾಯಣಿ, ಸ್ಫೂರ್ತಿ ಹುಣಶ್ಯಾಳ, ಸದಾಶಿವ ಮೇತ್ರಿ, ದಾನಿ ಬಾಬುರಾವ್, ಚಿಕ್ಕ ಹನುಮಂತೇಗೌಡ ಭಾಗವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಮಹಿಳೆ ಸಾಮಾಜಿಕವಾಗಿ ಪ್ರಗತಿಯಲ್ಲಿದ್ದಾಳೆ



■ ವಿಜಯಸಾಕ್ಷಿ ಸುದ್ದಿ, ಗದಗ

ವಿಜಯಸಾಕ್ಷಿ ಸುದ್ದಿ, ಆಧುನಿಕ ಸಮಾಜದಲ್ಲಿ ಮಹಿಳಾ ಯುವ ಪೀಳಿಗೆಯು ಸ್ವಾವಲಂಬಿಗಳಾಗಿ ಉತ್ತಮ ಆದಾಯ ಹೊಂದುವ ಮೂಲಕ ಮನೆಯ ಆರ್ಥಿಕ ಜವಾಬ್ದಾರಿಗಳನ್ನು ನಿರ್ವಹಿಸುತ್ತ, ಕುಟುಂಬದ ಏಳ್ಗೆಗಾಗಿ ಶ್ರಮಿಸುತ್ತಿರು ವದರಿಂದ ಸಾಮಾಜಿಕವಾಗಿ ಮಹಿಳೆ ಪ್ರಗತಿಯ ಹಾದಿಯಲ್ಲಿದ್ದಾಳೆ ಎಂದು ಗದಗ-ಬೆಟಗೇರಿ ಇನ್ನರ್‌ವ್ಹೀಲ್ ಕ್ಲಬ್ ಅಧ್ಯಕ್ಷೆ ರಜನಿ ಪಾಟೀಲ ಹೇಳಿದರು.

ಅವರು ಗದಗ ಜಿಲ್ಲಾ ಅಕ್ಕಮಹಾದೇವಿಯ ಕದಳಿಶ್ರೀ ವೇದಿಕೆಯಿಂದ ಜರುಗಿದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಕವಿತಾ ದಂಡಿನ ಮಾತನಾಡಿ, ಸ್ತ್ರೀಯರನ್ನು ಶಕ್ತಿ ಸ್ವರೂಪಿಯಾಗಿ ಆರಾಧಿಸುವ ದೇಶ ನಮ್ಮದು. ಕರ್ತೃತ್ವ, ನೇತೃತ್ವ, ಮಾತೃತ್ವ ಈ ಮೂರು ಜವಾಬ್ದಾರಿಯೊಂದಿಗೆ ಸ್ತ್ರೀಯರು ಸಮಾಜದಲ್ಲಿ ಸುಂದರಮಯವಾಗಿ ಬದುಕನ್ನು ರೂಪಿಸಿಕೊಂಡಿದ್ದಾರೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಜ್ಯೋತಿ ಭರಮಗೌಡರ ಮಾತನಾಡಿ, ಸ್ತ್ರೀಯರು ಅಕ್ಷರಸ್ಥರಾದರೆ ಸುಸಜ್ಜಿತ ನಾಗರಿಕ ಸಮಾಜ ನಿರ್ಮಾಣದಲ್ಲಿ ಪ್ರಮುಖ ಪಾತ್ರ ವಹಿಸುತ್ತಾಳೆ ಎಂದರು.

ಸುಮಾ ಪಾಟೀಲ, ಪ್ರಿಯಾಂಕ ಹಳ್ಳಿ ವಚನ ಪ್ರಾರ್ಥನೆಗೈದರು, ಹೇಮಾ ಪೊಂಗಾಲಿಯಾ ಸ್ವಾಗತಿಸಿದರು. ಸಾಗರಿಕ ಅಕ್ಕಿ ಪರಿಚಯಿಸಿದರು. ಸವಿತಾ ಸಿಂತ್ರಿ ನಿರೂಪಿಸಿದರು. ಶ್ವೇತಾ ಬಿಕ್ಷಾವತಿಮಠ ವಂದಿಸಿದರು.

ಕಾರ್ಯಕ್ರಮದಲ್ಲಿ ಮಂಜುಳಾ ಹಲಗತ್ತಿ, ಮೀನಾಕ್ಷಿ ಕೊರವನವರ, ರೇಖಾ ರೊಟ್ಟಿ, ಅಶ್ವಿನಿ ಮಾದಗುಂಡಿ, ಅನುರಾಧಾ ಅಮಾತ್ಯೆಗೌಡರ, ಸುನಂದ ಡಿಂಪಲಿ, ಅನುರಾಧಾ ಬಸವಾ, ಸುಧಾ ಬಂಡಾ, ವಿನೂತಾ ಜಲಗೇರಿ, ಸಂಪದ ಶಿಶುನಾಳ, ಗಿರಿಜಾ ನಿಡಗುಂದಿ, ರೇಖಾ ಜಿಗಜಿನ್ನಿ, ವಂದನಾ ಪತ್ತಾರ, ಅಶ್ವಿನಿ ಪಾಟೀಲ, ಮಹಾನಂದಾ ಕಾತರಕಿ, ಸೀತಾ ಚಿಟಗುಪ್ಪಿ ಮುಂತಾದವರಿದ್ದರು.

## ಕಸಾಪದಿಂದ 'ಸಾಹಿತ್ಯ ಜಾಗರಣೆ'



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿವನು ಸರಳತೆ, ಪ್ರಾಮಾಣಿಕತೆ ಮತ್ತು ನಿಷ್ಕಲ್ಮಶ ಮನಸ್ಸುಗಳ ಪ್ರತೀಕ. ತೋರಿಕೆಯ ಮತ್ತು ಆಡಂಬರದ ಪೂಜೆಯನ್ನು ಬಯಸದ ಮಹಾದೇವನನ್ನು ಇಂದ್ರಿಯ ನಿಗ್ರಹ, ಧ್ಯಾನ, ಸಂಯಮ ಮತ್ತು ವಿಶ್ವಾಸಭರಿತರಾಗಿ ಶಿವರಾತ್ರಿಯಂದು ಧ್ಯಾನಿಸಬೇಕು ಎಂದು ಸಾಹಿತಿ ಎಸ್.ಎಫ್. ಆದಿ ಅಭಿಪ್ರಾಯಪಟ್ಟರು.

ಲಕ್ಷ್ಮೇಶ್ವರ ತಾಲೂಕಾ ಕಸಾಪ ವತಿಯಿಂದ ಪಟ್ಟಣದ ಬಸ್ತಿಬಣದ ಈಶ್ವರ ದೇವಸ್ಥಾನದಲ್ಲಿ ಶಿವರಾತ್ರಿ ಅಂಗವಾಗಿ ಹಮ್ಮಿಕೊಂಡಿದ್ದ 'ಸಾಹಿತ್ಯ ಜಾಗರಣೆ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪುರಸಭೆ ಮಾಜಿ ಸದಸ್ಯ ಮಹೇಶ ಸೋಮಕ್ಕನವರ, ಹಬ್ಬ, ಸಂಪ್ರದಾಯ, ಆಚರಣೆಗಳು ಮನುಷ್ಯ ಮನುಷ್ಯರ ಮನಸ್ಸನ್ನು ಹತ್ತಿರ ತರುತ್ತವೆ. ಸಮಾಜದಲ್ಲಿ ಶಾಂತಿ, ಸೌಹಾರ್ದತೆ ನೆಲೆಸುವಂತೆ ಮಾಡುತ್ತವೆ ಎಂದರು.

ತಾಲೂಕಾ ವಕೀಲರ ಸಂಘದ ಅಧ್ಯಕ್ಷ ಬಸವರಾಜ ಬಾಳೇಶ್ವರಮಠ ಮಾತನಾಡಿ. ಇಂತಹ ಸ್ಥಳದಲ್ಲಿ ಮುಂದಿನ ತಲೆಮಾರಿಗೆ ಈ ಶ್ರೇಷ್ಠ ಸಂಪ್ರದಾಯ ದಾಟಿಸುವ ಜವಾಬ್ದಾರಿಯನ್ನು ತಾಲೂಕಾ ಕಸಾಪ ಹಮ್ಮಿಕೊಂಡಿರುವುದು ಸ್ತುತ್ಯಾರ್ಹ ಎಂದರು.

ಉಪನ್ಯಾಸಕ ಎ.ಎನ್. ನಾವಿ, ನಾಗರಾಜ ಗುಜರಿ, ಈಶ್ವರ ಉಡುಪಿ, ಅಶೋಕ ಸೊರಟೂರ, ಮಂಜುನಾಥ ಚಾಕಲಬ್ಬಿ, ಎಸ್.ಬಿ. ಅಣ್ಣಿಗೇರಿ, ಲಕ್ಷ್ಮಣ ಮೆಡ್ಲೇರಿ, ಈಶ್ವರ ಬನ್ನಿಕೊಪ್ಪ, ಸಿದ್ದಣ್ಣ ಹಡಪದ, ತಿಪ್ಪಣ್ಣ ಹಡಪದ, ಕೊಟ್ರೇಶ ಅಳವಂಡಿ, ರವಿ ನೀರಲಗಿ, ನಾರಾಯಣಪ್ಪ ಮಹಾಬಲೇಶ್ವರ ಮುಂತಾದವರು ಜಾಗರಣೆಯಲ್ಲಿ ಪಾಲ್ಗೊಂಡಿದ್ದರು. ಗುರು ಪುತ್ರ ಮೆಡ್ಲೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಅಶ್ವಿನಿ ಚೌದರಿ, ಚೇತನಾ, ಅಮೃತಾ, ನಮ್ರತಾ, ಮೇಘನಾ, ಸಂಜನಾ, ಸುನಿಲ್, ಅನಿಲ್ ಮುಂತಾದವರು ಜಾಗರಣ ಗೀತಗಾಯನ ನಡೆಸಿಕೊಟ್ಟರು. ಶಿವರಾಜ ಗುಜರಿ, ನಾಗರಾಜ ಮಜ್ಜಿಗುಡ್ಡ, ಮಂಜುನಾಥ ಚೌದರಿ ನಿರೂಪಿಸಿದರು.



■ ವಿಜಯಸಾಕ್ಷಿ ಸುದ್ದಿ, ಮಂಡ್ಯ

ಮಂಡ್ಯ ನಗರದ ಗಾಂಧಿ ಭವನದಲ್ಲಿ ಕದಂಬ ಸೈನ್ಯ ಹಾಗೂ ಕದಂಬ ದಿನಪತ್ರಿಕೆಯ ಸಂಯೋಗದಲ್ಲಿ ನಡೆದ ಸಮಾರಂಭದಲ್ಲಿ ಕರ್ನಾಟಕ ರಾಜ್ಯ ಡಾ. ಪಂಡಿತ್ ಪುಟ್ಟರಾಜ್ ರೈತ ಸಂಘದ ಸಂಸ್ಥಾಪಕ ಅಧ್ಯಕ್ಷ ಎಂ.ಪಿ. ಮುಳಗುಂದ ಅವರ ಸಾಮಾಜಿಕ ಸೇವೆಯನ್ನು ಗುರುತಿಸಿ 'ಕದಂಬರತ್ನ' ಪ್ರಶಸ್ತಿ ನೀಡಿ ಗೌರವಿಸಲಾಯಿತು. ಮಂಡ್ಯ ಸಂಸದೆ ಸುಮಲತಾ ಅಂಬರೀಶ್ ಕಾರ್ಯಕ್ರಮ ಉದ್ಘಾಟಿಸಿದರು. ಕಾರ್ಯಕ್ರಮದ ನೇತೃತ್ವವನ್ನು ಕದಂಬ ಸೈನ್ಯ ಸಂಸ್ಥಾಪಕ ಅಧ್ಯಕ್ಷ ರಮೇಶ್ ಬೇಕರಿ ವಹಿಸಿದ್ದರು.

## ಮಹಿಳೆಯರಿಗೂ ಉನ್ನತ ಸ್ಥಾನವಿದೆ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ವೇದಗಳ ಕಾಲದಿಂದಲೂ ಮಹಿಳೆಯರಿಗೆ ಪೂಜ್ಯನೀಯ ಸ್ಥಾನವಿದೆ. ಮಹಿಳೆ ಇತ್ತೀಚಿನ ದಿನಗಳಲ್ಲಿ ಎಲ್ಲಾ ಕ್ಷೇತ್ರಗಳಲ್ಲಿಯೂ ಪಾದಾರ್ಪಣೆ ಮಾಡುತ್ತಾ ಸದೃಢಳಾಗಿ ಬೆಳೆಯುತ್ತಿರುವುದು ಆಶಾದಾಯಕ ಬೆಳವಣಿಗೆಯಾಗಿದೆ ಎಂದು ಶಿಕ್ಷಕಿ ಪವಿತ್ರಾ ಮಟ್ಟಿ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ.1ರಲ್ಲಿ ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿ, ಇಂದು ಸಮಾಜದಲ್ಲಿ ಮಹಿಳೆ ಉನ್ನತ ಸ್ಥಾನ ಮಾನ ಪಡೆದಿದ್ದು, ಮಹಿಳೆಯರನ್ನು ಗೌರವದಿಂದ ಕಾಣಬೇಕು ಎಂದರು.

ಅಧ್ಯಕ್ಷತೆಯನ್ನು ಟಿ.ವೀಣಾ ವಹಿಸಿದ್ದರು. ಎಸ್.ಡಿ. ಪಂಡಿತ, ನಂದಾ ಮಟ್ಟಿ, ಶಭಾನಾ ಢಾಲಾಯತ, ಜ್ಯೋತಿ ಜಾಧಾವ, ಪವಿತ್ರಾ ಮಟ್ಟಿ, ಅಡುಗೆ ಸಿಬ್ಬಂದಿ ಸಂಕಮ್ಮಾ ಯಳವತ್ತಿ, ಮಾಬುಬ್ಬಿ ಹೊಸೂರ, ಲಕ್ಷ್ಮೀ ಬೆಂದ್ರೆ, ರೇಣುಕಾ ಬಗಾಡೆ, ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡರ, ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಎಂ.ಎಂ. ಮೇಗಲಮನಿ, ಎಂ.ಎಂ. ಕೊಪ್ಪಳ, ಕೆ.ಎಂ. ಹೆರಕಲ್ ಪಾಲ್ಗೊಂಡಿದ್ದರು. ತೋಷಿನಾ ಖವಾಸ ಸ್ವಾಗತಿಸಿದರು. ಕುಸುಮಾ. ಎಂ. ಬಗಾಡೆ ನಿರೂಪಿಸಿದರು. ಶ್ರೀಧರ ಕರಿಗಾರ ವಂದಿಸಿದರು.

### ನಿಧನ ವಾರ್ತೆ

**ರಾಚಪ್ಪ ನರೇಗಲ್**



ಲಕ್ಕುಂಡಿ: ಇಲ್ಲಿಯ ಕುರುಬರ ಓಣಿಯ ನಿವಾಸಿ ರಾಚಪ್ಪ ಸತ್ಯಪ್ಪ ನರೇಗಲ್ (68) ಶನಿವಾರ ನಿಧನರಾದರು. ಮೃತರು ಪತ್ನಿ, ಮೂವರು ಪುತ್ರರು, ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧು-ಬಳಗ ಅಗಲಿದ್ದಾರೆ.

## ನೂಲಿನ ಗಿರಣಿ ಆಡಳಿತ ಮಂಡಳಿ ಚುನಾವಣೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ಸೋಮೇಶ್ವರ ರೈತರ ಸಹಕಾರಿ ನೂಲಿನ ಗಿರಣಿಯ 5 ವರ್ಷಗಳ ಅವಧಿಗೆ ಆಡಳಿತ ಮಂಡಳಿ ಆಯ್ಕೆ ಚುನಾವಣೆ ಪ್ರಕ್ರಿಯೆ ಮಾ. 9ರಿಂದ ಮಾ.15ರವರೆಗೆ ಜರುಗಲಿದೆ. ಮೊದಲ ದಿನ ಶನಿವಾರ ಒಟ್ಟು 14 ನಾಮಪತ್ರಗಳು ಸಲ್ಲಿಕೆಯಾಗಿವೆ.

ಚುನಾವಣೆಗೆ ಸ್ಪರ್ಧೆ ಮಾ.23ರಂದು ಬೆಳಿಗ್ಗೆ 9 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಗಿರಣಿಯ ಕಟ್ಟಡದಲ್ಲಿ ಜರುಗಿಸಲಾಗುವುದು ಎಂದು ರಿಟರ್ನಿಂಗ್ ಅಧಿಕಾರಿ ಬಿ.ಆರ್. ನಿಡಗುಂದಿ ತಿಳಿಸಿದ್ದಾರೆ.

## ರಾಮೇಶ್ವರಂ ಕೆಫೆ ಬಾಂ ಬ್ ಸ್ಫೋಟ; NIAಗೆ ಮಹತ್ವದ ಸುಳಿವು, ಮೂವರು ಶಂಕಿತರು ವಶಕ್ಕೆ!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬೆಂಗಳೂರಿನ ರಾಮೇಶ್ವರಂ ಕೆಫೆ ಬಾಂಬ್ ಸ್ಫೋಟ ಪ್ರಕರಣದಲ್ಲಿ ಎನ್‌ಐಎಗೆ ಮಹತ್ವದ ಸುಳಿವು ಸಿಕ್ಕಿದೆ. ಈ ಸಂಬಂಧ ಮತ್ತೆ ಮೂವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದೆ.

## ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶ ಮಾ.12ಕ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಉವಾ ವಿದ್ಯಾಲಯ ಹೈಸ್ಕೂಲ್ ಮೈದಾನದಲ್ಲಿ ಮಾ.12ರಂದು ಮಧ್ಯಾಹ್ನ 3 ಗಂಟೆಗೆ ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕಿನ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶ ಏರ್ಪಡಿಸಲಾಗಿದೆ ಎಂದು ತಹಸೀಲ್ದಾರ ವಾಸುದೇವ ಎಂ.ಸ್ವಾಮಿ ಹೇಳಿದರು.

ಅವರು ಶನಿವಾರ ಪಟ್ಟಣದ ತಾ.ಪಂ ಕಾರ್ಯಾಲಯದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ, ಸರ್ಕಾರದ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳು ಪ್ರತಿ ಗ್ರಾಮಗಳಿಂದ ಸಮಾವೇಶಕ್ಕೆ ಆಗಮಿಸಬೇಕು. ಸಮಾವೇಶಕ್ಕೆ ಸಚಿವರು, ಶಾಸಕರು, ಜನಪ್ರತಿನಿಧಿಗಳು ಆಗಮಿಸುವರು ಎಂದರು.

ಶಿರಹಟ್ಟಿ ತಹಸೀಲ್ದಾರ ಅನಿಲ ಬಡಿಗೇರ ಮಾತನಾಡಿ, ತಾಲೂಕಾ ಮಟ್ಟದ ಎಲ್ಲ ಅಧಿಕಾರಿಗಳು ಫಲಾನುಭವಿಗಳನ್ನು ಸಮಾವೇಶಕ್ಕೆ ಕರೆತಂದು ಕಾರ್ಯಕ್ರಮ ಯಶಸ್ವಿಗೊಳಿಸಬೇಕು. ಕಾರ್ಯಕ್ರಮದಲ್ಲಿ ಸರ್ಕಾರದ ಯೋಜನೆಗಳ ಬಗ್ಗೆ ಮಾಹಿತಿ ನೀಡಲಾಗುವುದು ಎಂದರು.

ಈ ವೇಳೆ ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಡಾ. ನಿಂಗಪ್ಪ ಓಲೇಕಾರ, ಪಿಎಸ್ಐ ಈರಣ್ಣ ರಿತ್ತಿ ಸೇರಿದಂತೆ ತಾಲೂಕಾ ಮಟ್ಟದ ಎಲ್ಲ ಅಧಿಕಾರಿಗಳು ಇದ್ದರು.

### ಬಿಜೆಪಿ ಕಾರ್ಯಾಲಯದಲ್ಲಿ 'ವಿಕಸಿತ ಭಾರತ ಸಂಕಲ್ಪ ಪತ್ರ' ಜನಾಭಿಪ್ರಾಯಕ್ಕೆ ಚಾಲನೆ

# ಜನರ ಆಶಯದಂತೆ ಪಕ್ಷದ ಪ್ರಣಾಳಿಕೆ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಕಳೆದ 10 ವರ್ಷದ ಅವಧಿಯಲ್ಲಿ ದೇಶವನ್ನು ಅಭಿವೃದ್ಧಿ ಪಥದತ್ತ ಸಾಗಿಸುವುದರ ಜತೆಗೆ ಜನ ಮೆಚ್ಚುಗೆ ಆಡಳಿತ ನಡೆಸಿದ ಪ್ರಧಾನಿ ಮೋದಿ ಅವರು ಜನರ ಆಶಯದಂತೆ ಪಕ್ಷದ ಪ್ರಣಾಳಿಕೆ ಸಿದ್ಧಪಡಿಸಲು ಮುಂದಾಗಿದ್ದು ಅನುಕರಣೀಯ ಎಂದು ಎಂದು ಮಾಜಿ ಶಾಸಕ ಕಳಕಪ್ಪ ಬಂಡಿ ಹೇಳೀದರು.

ಲೋಕಸಭಾ ಚುನಾವಣೆ ಹಿನ್ನಲೆಯಲ್ಲಿ ಪಟ್ಟಣದ ಬಿಜೆಪಿ ಕಾರ್ಯಾಲಯದಲ್ಲಿ ನಡೆದ 'ವಿಕಸಿತ ಭಾರತ ಸಂಕಲ್ಪ ಪತ್ರ' ಜನಾಭಿಪ್ರಾಯಕ್ಕೆ ಶನಿವಾರ ಚಾಲನೆ ನೀಡಿ ಅವರು ಮಾತನಾಡಿದರು.

ಜನಾಶೀರ್ವಾದದಿಂದ 2014 ಹಾಗೂ 2019ರಲ್ಲಿ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದ ಪ್ರಧಾನಿ ಮೋದಿ ನೇತೃತ್ವದ ಸರ್ಕಾರವು ರೈತಪರ, ಕಾರ್ಮಿಕರ ಹಿತ ಕಾಯುವ ಯೋಜನೆಗಳ ಜತೆಗೆ ಜನಸಾಮಾನ್ಯರ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸುತ್ತಾ ಬಂದಿದೆ. ಪರಿಣಾಮ ದೇಶವನ್ನು ಅಭಿವೃದ್ಧಿ ಹಾದಿಯಲ್ಲಿ ಸಾಗಿಸುವುದರ ಜತೆಗೆ ವೈರಿ ರಾಷ್ಟ್ರಗಳ ಸದ್ದಡಗಿಸಲು ಸರ್ಜಿಕಲ್ ಸ್ಟ್ರೈಕ್‌ಗಳ ಮೂಲಕ ಭಾರತದ ತಂಟೆಗೆ ಬಂದರೆ ಸುಮ್ಮನಿರಲ್ಲ ಎಂಬ ಎಚ್ಚರಿಕೆ ನೀಡಿ, ವಿಶ್ವದ ಬಲಿಷ್ಠ ರಾಷ್ಟ್ರಗಳ ಪಟ್ಟಿಯಲ್ಲಿ ದೇಶವನ್ನು ಮುಂಚೂಣಿಯಲ್ಲಿ ತಂದು ನಿಲ್ಲಿಸಿದ ಕೀರ್ತಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸಲ್ಲುತ್ತದೆ ಎಂದರು.

ಮತಕ್ಷೇತ್ರದಲ್ಲಿನ ಅಭಿವೃದ್ಧಿ ಜತೆಗೆ ದೇಶದ ಭದ್ರತೆ ಮತ್ತು ಪ್ರಗತಿಗೆ ರೈತರು, ಯುವ ಸಮೂಹ ಹಾಗೂ ಮಹಿಳೆಯರು ಸೇರಿ ಎಲ್ಲ ವರ್ಗದ ಜನರಿಂದ ಸಲಹೆ, ಅಭಿಪ್ರಾಯಗಳನ್ನು ಪತ್ರದಲ್ಲಿ ಸಂಗ್ರಹಿಸಲಾಗುವುದು. ದೇಶದ ಜನತೆಯ ಆಶಯದಂತೆ ಮತ್ತೊಮ್ಮೆ ಪ್ರಧಾನಿ ಮೋದಿ ನೇತೃತ್ವದ ಸರ್ಕಾರ ರಚನೆಯಾಗಲಿದ್ದು ಪಕ್ಷದ ಕಾರ್ಯಕರ್ತರು ಕೇಂದ್ರ ಸರ್ಕಾರದ ಜನಪರ ಮತ್ತು ರೈತಪರ ಕಾರ್ಯಕ್ರಮಗಳನ್ನು ಪ್ರಚಾರ ಮಾಡಬೇಕು ಎಂದರು.

ಈ ವೇಳೆ ಬಿಜೆಪಿ ರೋಣ ಮಂಡಲದ ಅಧ್ಯಕ್ಷ ಮುತ್ತಣ್ಣ ಕಡಗದ, ಪ್ರಕೋಷ್ಠ ಜಿಲ್ಲಾ ಸಂಚಾಲಕರಾದ ಶಶಿಧರ ದಿಂಡೂರ, ರಮೇಶ ಸಜ್ಜುಗಾರ, ಪುರಸಭೆ ಹಂಗಾಮಿ ಅಧ್ಯಕ್ಷ ವೀರಪ್ಪ ಪಟ್ಟಣಶೆಟ್ಟಿ, ಸ್ಥಾಯಿ ಸಮಿತಿ ಮಾಜಿ ಚೇರ್ಮನ್ ಕನಕಪ್ಪ ಅರಳಿಗಿಡದ, ಬಿ.ಎಂ. ಸಜ್ಜನರ, ಮುದಿಯಪ್ಪ ಕರಡಿ, ಶಿವಾನಂದ ಮಠದ, ಉಮೇಶ ಮಲ್ಲಾಪೂರ, ಬಾಳು ಗೌಡರ, ಮಲ್ಲು ಕುರಿ ಸೇರಿ ಇತರರು ಇದ್ದರು.



> ದೇಶಾದ್ಯಂತ 1 ಕೋಟಿ ಜನರ ಅಭಿಪ್ರಾಯ ಸಂಗ್ರಹಿಸುವ ಗುರಿಯನ್ನು ಬಿಜೆಪಿ ಹೊಂದಿದ್ದು, ರಾಜ್ಯದಲ್ಲಿ ಕನಿಷ್ಠ 3 ಲಕ್ಷ ಜನರ ಅಭಿಪ್ರಾಯಗಳನ್ನು ಸಂಗ್ರಹಿಸುವ ಸಂಕಲ್ಪ ಮಾಡಲಾಗಿದೆ. ಹೀಗಾಗಿ ಜನಸವೇಕ ಎಂದರೆ ಹೇಗಿರಬೇಕು, ಜನಸೇವಕನ ಕೆಲಸ ಎಂದರೆ ಜನಾಭಿಪ್ರಾಯಕ್ಕೆ ಮೊದಲಾದ್ಯತೆ ನೀಡಬೇಕು ಎಂದು ಪಕ್ಷದ ಪ್ರಣಾಳಿಕೆಯನ್ನು ಸಿದ್ಧಪಡಿಸುತ್ತಿರುವ ಏಕೈಕ ಪಕ್ಷವೆಂದರೆ ಅದು ಬಿಜೆಪಿ ಪಕ್ಷ.
>
> – ಕಳಕಪ್ಪ ಬಂಡಿ. ಮಾಜಿ ಶಾಸಕರು.

## ಮಹಿಳೆಯರ ಆರೋಗ್ಯಕ್ಕೆ ಕ್ರೀಡೆ ಸಹಕಾರಿ




■ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳೆಯರು ಆರೋಗ್ಯಯುತ ಜೀವನ ನಡೆಸಲು ಕ್ರೀಡೆಗಳು ಸಹಕಾರಿಯಾಗುತ್ತವೆ ಎಂದು ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ. ಅಭಿಪ್ರಾಯಪಟ್ಟರು.

ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಮಹಿಳಾ ದಿನಾಚರಣೆಯ ನಿಮಿತ್ಯ ಹಮ್ಮಿಕೊಳ್ಳಲಾಗಿದ್ದ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕ್ರೀಡೆಗಳಲ್ಲಿ ಪಾಲ್ಗೊಳ್ಳುವುದರ ಮೂಲಕ ಮಹಿಳೆಯರು ಆರೋಗ್ಯ ಕಾಪಾಡಿಕೊಳ್ಳಬೇಕು. ಮಹಿಳೆಯರಿಗೆ ಆರೋಗ್ಯ ಸಂಪತ್ತು ಬಹಳ ಮುಖ್ಯವಾಗಿದೆ. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಮಹಿಳೆಯರಿಗಾಗಿ ಕ್ರೀಡಾಕೂಟಗಳನ್ನು ಹಮ್ಮಿಕೊಂಡಿದ್ದು ಪ್ರಶಂಸನೀಯವಾಗಿದೆ ಎಂದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಶರಣು ಗೋಗೇರಿ ಸರ್ವರನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ, ಮಹಿಳೆಯರಿಗಾಗಿ 25ರಿಂದ 45 ವಯಸ್ಸಿನವರೆಗೆ ಹಾಗೂ 46ರ ಮೇಲ್ಪಟ್ಟ ವಯಸ್ಸಿನ ಸ್ಪರ್ಧಾರ್ಥಿಗಳಿಗೆ 2 ಗುಂಪುಗಳಲ್ಲಿ ಸ್ಪರ್ಧೆ ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದರು.

ಕಾರ್ಯಕ್ರಮದಲ್ಲಿ ಬಸವ ಯೋಗ ಪಾಠಶಾಲೆಯ ಪ್ರಾಚಾರ್ಯ ಕೆ.ಎಸ್. ಪಲ್ಲೇದ, ಪಿಎಸ್ಐ ಎಂ.ಡಿ ಪಾಟೀಲ ಸೇರಿದಂತೆ ಕ್ರೀಡಾಪಟುಗಳು ಹಾಜರಿದ್ದರು. ವೆಂಕಟೇಶ ಅಲ್ಕೋಡ ನಾಡಗೀತೆ ಪ್ರಸ್ತುತಪಡಿಸಿದರು. ಗೀತಾಂಜಲಿ ಗೌಡರ ಕಾರ್ಯಕ್ರಮ ನಿರೂಪಿಸಿದರು. ಚಂದ್ರಶೇಖರ ಮೇಲಿನಮನಿ ವಂದಿಸಿದರು.

### ಪಂಚಮಸಾಲಿ ಸಮಾಜದ ಪೂರ್ವಭಾವಿ ಸಭೆಯಲ್ಲಿ ಚಂಬಣ್ಣ ಬಾಳಿಕಾಯಿ

# ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಮಾ.12ಕ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದಿಂದ ಮಾ.12ರಂದು ಹರಿಹರ ಪಂಚಮಸಾಲಿ ಪೀಠದ ಜಗದ್ಗುರು ಶ್ರೀ ವಚನಾನಂದ ಮಹಾಸ್ವಾಮಿಗಳ ಸಾನಿಧ್ಯದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ಪಂಚಮಸಾಲಿ ಸಮಾಜದ ಮಾಜಿ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ ಹೇಳಿದರು.

ಅವರು ಶನಿವಾರ ಈ ಕುರಿತು ಕರೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ, ಪ್ರತಿವರ್ಷ ಪಂಚಮಸಾಲಿ ಸಮಾಜದ ತಾಲೂಕಾ ಘಟಕದಿಂದ ಮಹಿಳಾ ದಿನಾಚರಣೆಯನ್ನು ಪಟ್ಟಣದ ವೀರಭದ್ರೇಶ್ವರ ಹೋಟೆಲ್ ಆವರಣದಲ್ಲಿ ಸಂಜೆ 4ಕ್ಕೆ ವಿಶೇಷವಾಗಿ ಆಚರಿಸಲಾಗುತ್ತಿದೆ. ಸಮಾಜದ ಹರಿಹರ ಪೀಠದ ಪಂಚಮಸಾಲಿ ಜಗದ್ಗುರು ಶ್ರೀ ವಚನಾನಂದ ಮಹಾಸ್ವಾಮಿಗಳ ಸಾನಿಧ್ಯ ವಹಿಸುವರು. ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಮಹಿಳೆಯರನ್ನು ಗೌರವಿಸಲಾಗುವುದು. ಅಂತಾರಾಷ್ಟ್ರೀಯ ಮಟ್ಟದ ಕುಸ್ತಿಪಟು ಜಯಶ್ರೀ ಅಮರಪ್ಪ ಗುಡಗುಂಟಿ ಅವರಿಗೆ 'ಸುಕೃತಿಮಾ' ಪ್ರಶಸ್ತಿ ನೀಡಲಾಗುವುದು.

ಅಧ್ಯಕ್ಷತೆಯನ್ನು ಸುನೀತಾ ಮಂಜುನಾಥ ಮಾಗಡಿ ವಹಿಸಲಿದ್ದಾರೆ. ಸಮಾಜದ ರಾಜ್ಯ ಉಪಾಧ್ಯಕ್ಷೆ ವಸಂತಾ ಹುಲ್ಲತ್ತಿ ಉದ್ಘಾಟಿಸಲಿದ್ದಾರೆ. ಕ್ಷೇತ್ರ ಶಿಕ್ಷಣಾಧಿಕಾರಿ ಮಂಗಳಾ ತಾಪಸ್ಕರ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಸಾಧಕ ಕೃಷಿ ಮಹಿಳೆ ರಾಜೇಶ್ವರಿ ಪಾಟೀಲ ಉಪನ್ಯಾಸ ನೀಡಲಿದ್ದಾರೆ. ತಾಯಿ–ಮಗಳ ಸಂಬಂಧವನ್ನು ಗಟ್ಟಿಗೊಳಿಸುವ ನಿಟ್ಟಿನಲ್ಲಿ ಅವರಿಬ್ಬರ ಅನ್ಯೋನ್ಯತೆಯನ್ನು ಮತ್ತಷ್ಟು ಹೆಚ್ಚಿಸುವಲ್ಲಿ 'ನನ್ನಮ್ಮ ಸೂಪರ್ ಸ್ಟಾರ್' ಎಂಬ ವಿಶೇಷ ಕಾರ್ಯಕ್ರಮವನ್ನು ಸುಧಾ ಹುಚ್ಚಣ್ಣವರ ಉದ್ಘಾಟಿಸಲಿದ್ದಾರೆ. ಪುರಸಭೆ ಮಾಜಿ ಅಧ್ಯಕ್ಷೆ ಜಯಮ್ಮ ಅಂದಲಗಿ, ವಕೀಲೆ ನಂದಾ ಅಮಾಸಿ ಸೇರಿ ಅನೇಕರು ಆಗಮಿಸುವರು ಎಂದು ಹೇಳಿದರು.

ತಾಲೂಕಾಧ್ಯಕ್ಷ ಮಂಜುನಾಥ ಮಾಗಡಿ ಕಾರ್ಯಕ್ರಮದ ರೂಪರೇಷೆಗಳನ್ನು ವಿವರಿಸಿದರು. ಸಮಾಜದ ಹಿರಿಯರಾದ ಡಿ.ಬಿ. ಬಳಿಗಾರ, ಎಸ್.ಎಫ್. ಆದಿ, ಶಿವನಗೌಡ ಅಡರಕಟ್ಟಿ, ಮಲ್ಲೇಶಪ್ಪ ಕಣವಿ, ಶಿವಾನಂದ ಬನ್ನಿಮಟ್ಟಿ, ಮಲ್ಲಿಕಾರ್ಜುನ ಬಾಳಿಕಾಯಿ, ಗಂಗಾಧರ ಮೆಣಸಿನಕಾಯಿ, ಚಂದ್ರು ಮಾಗಡಿ, ಬಸವರಾಜ ಕಲ್ಲೂರ, ಬಸಣ್ಣ ಬಾಳಿಕಾಯಿ, ಜುಂಜನಗೌಡ ನರಸಮ್ಮನವರ ಇದ್ದರು.




## ಸಮಾಜದ ಒಳಿತಿಗಾಗಿ ಬದುಕಿದವರೇ ಸಂತರು

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸತ್ಯದ ಹಾದಿಯಲ್ಲಿ, ಸಮಾಜದ ಒಳಿತಿಗಾಗಿ, ಅಜ್ಞಾನದ ಕತ್ತಲೆಯನ್ನು ಕಳೆಯುತ್ತಾ ಬದುಕಿದವವರೇ ಸಂತರು, ಶರಣರು ಎಂದು ಅಣ್ಣಿಗೇರಿ ದಾಸೋಹಮಠದ ಶಿವಕುಮಾರ ಮಾಹಾಸ್ವಾಮಿಜಿ ಹೇಳಿದರು.

ಅವರು ಪಟ್ಟಣ ಸಮೀಪದ ನೀಲಗುಂದ ಗುದ್ನೇಶ್ವರಮಠದ ದಿವ್ಯ ಚೇತನ ಟ್ರಸ್ಟ್ ವತಿಯಿಂದ ಮಾಹಾ ಶಿವರಾತ್ರಿ ಅಂಗವಾಗಿ ಜರುಗಿದ 'ಸಂತ ವಾಣಿ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಪ್ರಭುಲಿಂಗ ದೇವರು ಸಮಾಜದ ಒಳತಿಗಾಗಿ, ಸತ್ಯದ ಮಾರ್ಗದಲ್ಲಿ, ಜನರ ಕಷ್ಟ ಕಾರ್ಪಣ್ಯಗಳನ್ನು ಕಳೆಯುತ್ತಾ ಸುಜ್ಞಾನದ ಮಾರ್ಗದಲ್ಲಿ ಸಾಗುತ್ತಿದ್ದಾರೆ. ಇಂತಹ ಸಂತರು, ಶರಣರು ನಮ್ಮ ಬದುಕಿಗೆ ದಾರಿ ದೀಪವಾಗಿದ್ದು, ತಮಗಾಗಿ ಏನನ್ನೂ ಬಯಸದೇ ಶಾಲಾ ಮಕ್ಕಳ ಅಭಿವೃದ್ಧಿ, ಅವರಿಗೆ ಸುಸಂಸ್ಕೃತ ವಿದ್ಯಾದಾನ ಮಾಡುವ ಮೂಲಕ ಈ ಭಾಗದ ಶರಣರಾಗಿದ್ದಾರೆ. ಇಂತಹ ನೆಲ, ಜಲ ಪಾವನವಾದಂತೆ ನಾವೆಲ್ಲರೂ ಪುಣ್ಯವಂತರು ಎಂದರು.

ಗುದ್ನೇಶ್ವರಮಠದ ಪ್ರಭುಲಿಂಗ ದೇವರು ಮಾತನಾಡಿ, ನಾಡಿನಾದ್ಯಾಂತ ಸಾವಿರಾರು ಶರಣ ಶರಣೆಯರು ತಮ್ಮ ಬದುಕನ್ನು ಸಮಾಜದ, ಜನರ ಒಳಿತಿಗಾಗಿ ಸಮರ್ಪಿಸಿಕೊಂಡು ಸಮಾಜದ ಉದ್ಧಾರಕ್ಕಾಗಿ ತಮ್ಮ ಜೀವನವನ್ನು ಗಂಧದಂತೆ ತೇದವರು. ಇಂತಹ ಮಹನೀಯರ ಆದರ್ಶಗಳನ್ನು ನಾವೆಲ್ಲರೂ ಪಾಲಿಸಿ, ಆಚರಣೆಯಲ್ಲಿ ತೊಡಗಿದಾಗ ಬದುಕು ಸುಂದರವಾಗುತ್ತದೆ ಎಂದರು.

ಸಾನಿಧ್ಯವನ್ನು ಧಾರವಾಡ ಮುರುಘಾಮಠ, ಮುಳಗುಂದ ಗವಿಮಠದ ಡಾ.ಮಲ್ಲಿಕಾರ್ಜುನ ಮಾಹಾಸ್ವಾಮೀಜಿ ವಹಿಸಿದ್ದರು. ಧಾರವಾಡ ಮುರುಘಾಮಠದ ಸಚ್ಚಿದಾನಂದ ದೇವರು, ರಾಮಣ್ಣಾ ಕಮಾಜಿ, ಬಸವರಾಜ ಬೆಂಡಿಗೇರಿ, ಚಿಂಚಲಿ ಗ್ರಾ.ಪಂ. ಅಧ್ಯಕ್ಷ ದೇವಮ್ಮಾ ಬಂಗಾರಿ ಇದ್ದರು.



## ಅಲೆಮಾರಿ ಸಮುದಾಯಗಳ ಸಮಾವೇಶ ಮಾ.15ಕ್ಕೆ




■ವಿಜಯಸಾಕ್ಷಿ ಸುದ್ದಿ, ಗದಗ

ಎಸ್‌ಸಿ, ಎಸ್‌ಟಿ ಅಲೆಮಾರಿ, ವಿಮುಕ್ತ ಬುಡಕಟ್ಟು ಸಂಘಟನೆಗಳ ಒಕ್ಕೂಟದ ಆಶ್ರಯದಲ್ಲಿ ಮಾ. 15ರಂದು ಬೆಂಗಳೂರಿನ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಅಲೆಮಾರಿ ಸಮುದಾಯಗಳ ರಾಜ್ಯಮಟ್ಟದ ಬೃಹತ್ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಒಕ್ಕೂಟದ ರಾಜ್ಯಾಧ್ಯಕ್ಷ ಆದರ್ಶ ಯಲ್ಲಪ್ಪ ಹೇಳಿದರು.

ಶನಿವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾಮಾಜಿಕವಾಗಿ, ಆರ್ಥಿಕವಾಗಿ ಹಿಂದುಳಿದ, ಅವಕಾಶ ವಂಚಿತ ಸಮುದಾಯಗಳನ್ನು ಒಟ್ಟುಗೂಡಿಸಿ ಸದೃಢಗೊಳಿಸುವುದು ಸಂಘಟನೆಗ ಉದ್ದೇಶವಾಗಿದೆ. ಈ ನಿಟ್ಟಿನಲ್ಲಿ ಸರಕಾರದ ಮುಂದೆ ಅನೇಕ ಹಕ್ಕೊತ್ತಾಯಗಳನ್ನು ಮಂಡಿಸಲಿದ್ದೇವೆ ಎಂದರು.

ಅಲೆಮಾರಿ ಸಮುದಾಯಗಳ ಕಲ್ಯಾಣಕ್ಕಾಗಿ ಸರಕಾರಿ ಅಲೆಮಾರಿ ಆಯೋಗ ರಚನೆ ಮಾಡಿದ್ದು, ಕೂಡಲೇ ಆಯೋಗ ಕಾರ್ಯಾರಂಭ ಮಾಡಬೇಕು. ಅಲೆಮಾರಿ ಜನಾಂಗದ ವಸತಿ ರಹಿತರಿಗೆ ಕನಿಷ್ಠ 5 ಲಕ್ಷ ರೂ. ನೆರವು ನೀಡಬೇಕು, ಅಲೆಮಾರಿ ಸಮುದಾಯಗಳ ಕಲೆ, ಸಂಸ್ಕೃತಿ ಉಳಿವಿಗಾಗಿ ಬೆಂಗಳೂರು ಸುತ್ತಮುತ್ತ 10 ಎಕರೆ ಜಾಗ ನೀಡಬೇಕು. ಅಲೆಮಾರಿ ಸಮುದಾಯಗಳಿಗೆ ಬೇರೆ ಬೇರೆ ರಾಜ್ಯದಲ್ಲಿ ಇರುವಂತೆ ಪ್ರತ್ಯೇಕ ಮೀಸಲಾತಿ ಕಲ್ಪಿಸುವುದು ಸೇರಿದಂತೆ ಅನೇಕ ಬೇಡಿಕೆಗಳನ್ನು ಸಮಾವೇಶದ ಮೂಲಕ ಸರಕಾರಕ್ಕೆ ಸಲ್ಲಿಸಲಾಗುವುದು ಎಂದರು.

ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಜಿ.ಎಚ್. ಮಂಜುನಾಥ ದಾಯತ್ಕರ್, ದುರಗೇಶ ವಿಭೂತಿ, ಕೆ.ಎಚ್. ಬೇಲೂರ, ಸುಮಿತ್ರಾ ಗಂಗಾವತಿ, ಫಕೀರೇಶ ಕಟ್ಟಿಮನಿ, ಯಲ್ಲಪ್ಪ ಡೊಕ್ಕಣ್ಣವರ, ಯಲ್ಲಪ್ಪ ಒಂಟೆತ್ತಿನ, ಹನುಮಂತ ಶಿಳ್ಳೆಕ್ಯಾತರ, ಹನುಮಂತಪ್ಪ ವಿಭೂತಿ ಮುಂತಾದವರಿದ್ದರು.

## ದಾನಗಳಲ್ಲಿ ವಿದ್ಯಾದಾನ ಸರ್ವಶ್ರೇಷ್ಠ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಅನ್ನದಾನಕಿಂತ ವಿದ್ಯಾದಾನ ಶ್ರೇಷ್ಠವಾದದ್ದು ಎಂದು ದ್ರಾಕ್ಷಾಯಿಣಿ ಅಳವಂಡಿ ಹೇಳಿದರು.

ಅವರು ಸಮೀಪದ ನೀಲಗುಂದ ಗುದ್ನೇಶ್ವರಮಠದ ದಿವ್ಯ ಚೇತನ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಮಾಹಾಶಿವರಾತ್ರಿ ಅಂಗವಾಗಿ ಶಿವರಾತ್ರಿ ಜಾಗರಣೆಯಲ್ಲಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ವಿದ್ಯಾದಾನವನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ನೀಡುತ್ತಿರುವುದು ಅತ್ಯಂತ ಶ್ಲಾಘನಿಯವಾದ ಕಾರ್ಯವಾಗಿದೆ. ಇಂತಹ ಸಂಸ್ಥೆಯಲ್ಲಿ ಕಲಿತ ಮಕ್ಕಳು ಪುಣ್ಯವಂತರು, ಇಲ್ಲಿ ಶಿಕ್ಷಣದ ಜೊತೆ ಉತ್ತಮ ಸಂಸ್ಕಾರ ದೊರೆಯುತ್ತಿದೆ ಎಂದರು.

ಶಿವರಾತ್ರಿ ಜಾಗರಣೆಯಲ್ಲಿ ಹುಬ್ಬಳ್ಳಿ ಆರ್ಶೀವಾದ ನೃತ್ಯ ಕಲಾ ಕೇಂದ್ರದ ವಿದುಷಿ ಶೈಲಾ ಕಟಗಿ ಇವರಿಂದ ಭರತನಾಟ್ಯ, ಮಲ್ಲಿಕಾರ್ಜುನ ಭಜಂತ್ರಿ ಇವರಿಂದ ಶಹನಾಯಿವಾದ, ನಾರಾಯಣ ಹಿರೇಕೊಳಚಿ ಇವರಿಂದ ವಯೋಲಿನ್ ವಾದನ, ಮಲ್ಲಪ್ಪ ಹೊಂಗಲ ಇವರಿಂದ ಹಾಸ್ಯ ಸಂಜೆ, ಸೌಮ್ಯಾ ಓಸವಾಲ ಇವರಿಂದ ಸಂಗೀತ ಸೇವೆ ಜರುಗಿತು.

ಕಾರ್ಯಕ್ರಮದ ಸಾನಿಧ್ಯವನ್ನು ಹೊಸಳ್ಳಿ ಬೂದಿಶ್ವರಮಠದ ಬೂದಿಶ್ವರ ಮಾಹಾಸ್ವಾಮಿಜಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಯುವ ಧುರೀಣ ಕೃಷ್ಣಗೌಡ. ಎಚ್. ಪಾಟೀಲ್, ಎಂ.ಡಿ. ಬಟ್ಟೂರ, ಬೆಂಗಳೂರು ಡಿಐಜಿಪಿ ರವಿ ಚನ್ನಣ್ಣವರ, ಅಪ್ಪಣ್ಣಾ ಇನಾಮತಿ, ವಿ.ಎಸ್. ನೀಲಗುಂದ ಪಾಲ್ಗೊಂಡಿದ್ದರು. ಗೌರಮ್ಮಾ ಬಡ್ನಿ, ವಿ.ಪಿ. ಹಿರೇಮಠ, ಎಸ್. ಎಲ್. ನೇಕಾರ ಅವರನ್ನು ಸನ್ಮಾನಿಸಲಾಯಿತು.

## ಜಿಎಐಎಲ್ ನಿಂದ ಸಿಎನ್ ಜಿ ದರ ಪ್ರತಿ ಕೆ.ಜಿಗೆ 2.50 ರೂಪಾಯಿ ಕಡಿತ!

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಎಲ್ ಪಿ ಜಿ ಸಿಲಿಂಡರ್ ದರ 100 ರೂಪಾಯಿ ಕಡಿಮೆಯಾಗುತ್ತಿದ್ದಂತೆಯೇ ಜಿಎಐಎಲ್ (ಇಂಡಿಯಾ) ಲಿಮಿಟೆಡ್ ಹಾಗೂ ಅದರ ಶಾಖಾ ಸಂಸ್ಥೆ ಜಿಎಐಎಲ್ ಗ್ಯಾಸ್ ಲಿಮಿಟೆಡ್ ಸಿಎನ್ ಜಿ ದರವನ್ನು ಇಳಿಕೆ ಮಾಡಿವೆ. ದೇಶಾದ್ಯಂತ ಸಿಎನ್ ಜಿ ದರ ಪ್ರತಿ ಕೆ.ಜಿಗೆ 2.50 ರೂಪಾಯಿ ಕಡಿಮೆಯಾಗಲಿದೆ.

# ಶಿಕ್ಷಕರ ಮಾರ್ಗದರ್ಶನದಂತೆ ಅಭ್ಯಾಸ ಮಾಡಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪಿಎಸ್‌ಬಿಡಿ ಬಾಲಕಿಯರ ಪ್ರೌಢಶಾಲೆಯಲ್ಲಿ ಹಮ್ಮಿಕೊಂಡಿದ್ದ ಮಹಾ ಸರಸ್ವತಿ ಪೂಜೆ ಹಾಗೂ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭವನ್ನು ಸಂಸ್ಥೆಯ ಅಧ್ಯಕ್ಷೆ ಸುವರ್ಣ ಬಾಯಿ ಬಹದ್ದೂರ ದೇಸಾಯಿ ಉದ್ಘಾಟಿಸಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮಕ್ಕಳ ಸಾಹಿತಿ ರಾಜೇಂದ್ರ ಗಡಾದ, ಮಕ್ಕಳು ಶಿಕ್ಷಕರ ಮಾರ್ಗದರ್ಶನದಂತೆ ಅಭ್ಯಾಸ ಮಾಡಿ, ಸಮಯದ ಸದುಪಯೋಗ ಪಡಿಸಿಕೊಂಡು ಉತ್ತಮ ಫಲಿತಾಂಶ ಪಡೆದು ಶಾಲೆಗೆ, ಊರಿಗೆ ಒಳ್ಳೆಯ ಕೀರ್ತಿ ತರಬೇಕು ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಮಂಗಲಾ ತಾಪಸ್ಕರ, ಅಧ್ಯಕ್ಷತೆ ವಹಿಸಿದ್ದ ಶಾರಕ್ಕನವರು ಮಹಾಂತಶೆಟ್ಟರ ಮಾತನಾಡಿದರು. ಶಾಲೆಗೆ ದೇಣಿಗೆ ನೀಡಿದ ಶಿವಲೀಲಾ ಮರಗಾಲ ಹಾಗೂ ನೂತನ ಕ್ಷೇತ್ರ ಶಿಕ್ಷಣಾಧಿಕಾರಿ ಮಂಗಲಾ ತಾಪಸ್ಕರರನ್ನು ಸಂಸ್ಥೆ ಮತ್ತು ಪ್ರೌಢಶಾಲೆಯ ಪರವಾಗಿ ಸನ್ಮಾನಿಸಲಾಯಿತು. ಬಳಗದ ಸದಸ್ಯರಾದ ಸಾವಿತ್ರಮ್ಮ, ಶಿಕ್ಷಣಾಧಿಕಾರಿ ಉಮೇಶ ಹುಚ್ಚಯ್ಯನಮಠ, ಸಿಆರ್‌ಪಿ ಉಮೇಶ ನೇಕಾರ, ಸತೀಶ ಭೋಮಲೆ, ಶಿವಾನಂದ ಹೂವಿನ ಉಪಸ್ಥಿತರಿದ್ದರು.

ಮುಖ್ಯೋಪಾಧ್ಯಾರಾದ ಜೆ.ಡಿ. ಲಮಾಣಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಎಂ.ಸಿ. ಹಿರೇಮಠ ಪ್ರಶಸ್ತಿ ವಿತರಣಾ ಕಾರ್ಯಕ್ರಮ, ಶೀಲಾ ತಳವಾರ ನಗದು ಬಹುಮಾನ ವಿತರಣೆ ಕಾರ್ಯಕ್ರಮ ನಿರ್ವಹಿಸಿದರು. ಎನ್.ಡಿ. ಗೌರಿ, ಪಿ.ಎಲ್. ಪಾಟೀಲ ಅನಿಸಿಕೆ ಹಂಚಿಕೊಂಡರು. ಎಸ್.ಎಸ್. ಮಠದ ಸ್ವಾಗತಿಸಿದರು. ಕಾವ್ಯಾ ದೇಸಾಯಿ, ಶ್ವೇತಾ ಅಂಬಲಿ ನಿರ್ವಹಿಸಿದರು. ಎಸ್.ಎಂ. ಹಾದಿಮನಿ ನಿರೂಪಿಸಿದರು. ಆರ್.ಸಿ. ಉಮಚಗಿ ವಂದಿಸಿದರು.



VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka